ಸಂಪುಟ : ೮ ಸಂಚಿಕೆ : ೧೫೮ ಪುಟ : ೪ ಬೆಲೆ : ೩.೦೦ ಬುಧವಾರ ಜುಲೈ ೨೬, ೨೦೨೩ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 158 Pages : 4 Price : 3.00 Wednesday July 26, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದು ಗದಗ-ಬೆಟಗೇರಿ ಅವಳಿ ನಗರದಲ್ಲಿ ನೀರು ಪೂರೈಕೆಯ ಸ್ಥಳಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಈ ಮೂಲಕ ಗದಗ ಬೆಟಗೇರಿ ಅವಳಿ ನಗರದಲ್ಲಿ ಇಂದು ದಿ. 26-07-2023ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ.24, 25ರ ಹಾಳದಿಬ್ಬ ಭಾಗ-1, 2, 3, ಕುರುಬರಗರಡಿ, ಮಾಬುಸುಬಾನಿ ಕಟ್ಟಿ, ಕರುಗಲ್ಲ್ ಓಣಿ, ಅಬ್ಬಿಗೇರಿ ಲೈನ್, ಪುಣೇಕರ ಲೈನ್, ಕರಿದೇವರ ಗುಡಿ ಲೈನ್, ಜಿ.ಎಸ್.ಹಿರೇಮಠ ಲೈನ್, ಕೊಪ್ಪದರ ಲೈನ್, ಜೀರ್ ಓಣಿ, ಅಂಭಾಭವಾನಿ ಲೈನ್, ಹನಮನಗರಡಿ ಲೈನ್, ವಾರ್ಡ್ ನಂ.16ರ ಹೊಂಬಳನಾಕಾ ಜನತಾ ಕಾಲನಿ, ವಾರ್ಡ್ ನಂ.01ರ ಎಸ್. ಎಮ್.ಕೃಷ್ಣಾ ನಗರದ ಕೆಳಗಿನ ಭಾಗಗಳು ಯಮನೂರರವರ ಲೈನ್, ಬಡಿಗೇರ ಲೈನ್, ಆದಿಶಕ್ತಿ ಲೈನ್, ವಾರ್ಡ್ ನಂ 28 ಪಂಚಾಕ್ಷರಿ ನಗರ 3,4,5ನೇ ಕ್ರಾಸ್‌ಗಳು, ವಾರ್ಡ್ ನಂ 7 ಪೆಂಡಾರ್ ಓಣಿ, ನಂದರಗಿಯವರ ಲೈನ್, ಬಚ್ಚಲಕಮ್ಮನ ಗುಡಿ ಲೈನ್, ಮುತ್ತಿನಪೆಂಡಿನಮಠದವರ ಲೈನ್, ಅಬ್ಬಿಗೇರಿ ಲೈನ್, ವಾರ್ಡ್ ನಂ 29, 11ರ ಪಿ.&ಟಿ. ಕ್ವಾಟರ್ಸ್ ಲೈನ್, ರಾಜೀವಗಾಂಧಿ ನಗರ ಭಾಗಗಳು, ಕರಿಯಮ್ಮನ ಕಲ್ಲು, ಇರಾನಿ ಕಾಲೋನಿ, ವಾರ್ಡ್ ನಂ 16ರ ರಹಮತನಗರ ಭಾಗಗಳು, ವಾರ್ಡ್ ನಂ 26ರ ಕೃಷ್ಣ ಟಾಕೀಜ, ಕಲಾಮಂದಿರ ರಸ್ತೆ, ಅಕ್ಕನ ಬಳಗ, ಜೆ.ಟಿ.ಮಠ ರಸ್ತೆ, ವಾರ್ಡ್ ನಂ 30, 34 ಹುಡ್ಕೋ ಕೆಲವು ಭಾಗಗಳು, ವಾರ್ಡ್ ನಂ.22ರ ತಾಜ ನಗರ ಭಾಗಗಳು.

(ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ಈ ಮೂಲಕ ಪೌರಾಯುಕ್ತರು ವಿನಂತಿಸಿದ್ದಾರೆ.)

### ಹಾವೇರಿ ಜಿಲ್ಲಾ ಪ್ರಗತಿ ಪರಿಶೀಲನೆ ನಡೆಸಿದ ಸಿಎಂ ಸಿದ್ದರಾಮಯ್ಯ: ಪ್ರಗತಿ ಸಾಧಿಸಲು ಕಟ್ಟುನಿಟ್ಟಿನ ಸೂಚನೆ

# ಜಿಲ್ಲೆಯನ್ನು ಪ್ರಗತಿ ಪಥದಲ್ಲಿ ಮುನ್ನಡೆಸಿ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ಹಾವೇರಿ ಜಿಲ್ಲೆ ಆರೋಗ್ಯ, ಆದಾಯ, ಮಾನವ ಅಭಿವೃದ್ಧಿ, ಶಿಕ್ಷಣ ಸೂಚ್ಯಂಕದಲ್ಲಿ ರಾಜ್ಯದ ಸರಾಸರಿಗಿಂತ ಅತ್ಯಂತ ಹಿಂದುಳಿದಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯು ಈ ಎಲ್ಲ ವಲಯಗಳ ಸೂಚ್ಯಂಕಗಳಲ್ಲಿ ಪ್ರಗತಿ ಕಾಣುವಂತೆ ಕೆಲಸ ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾವೇರಿ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಎರಡನೆ ಬಾರಿ ಮುಖ್ಯ ಮಂತ್ರಿಯಾಗಿ ಆಯ್ಕೆಯಾದ ಬಳಿಕ ಮಂಗಳವಾರ ಮೊದಲ ಬಾರಿ ಹಾವೇರಿಗೆ ಭೇಟಿ ನೀಡಿ, ಜಿಲ್ಲಾಡಳಿತ ಸಭಾಂಗಣದಲ್ಲಿ ಪ್ರಗತಿ ಪರಿಶೀಲನೆ ನಡೆಸಿದರು.

ಹಾವೇರಿ ಜಿಲ್ಲೆಯು ಆರೋಗ್ಯ ಸೂಚ್ಯಂಕದಲ್ಲಿ 17ನೇ ಸ್ಥಾನ, ಆದಾಯ ಸೂಚ್ಯಂಕದಲ್ಲಿ 21ನೇ ಸ್ಥಾನ, ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ 27ನೇ ಸ್ಥಾನ, ಶಿಕ್ಷಣ ಸೂಚ್ಯಂಕದಲ್ಲಿ 28ನೇ ಸ್ಥಾನದಲ್ಲಿದೆ. ರಾಜ್ಯದ ಸರಾಸರಿ ಆದಾಯಕ್ಕಿಂತ ಹಾವೇರಿ ಜಿಲ್ಲೆಯ ಸರಾಸರಿ ಆದಾಯ ಬಹಳ ಕಡಿಮೆ ಇದೆ. ಹೀಗಾಗಿ ಹಾವೇರಿ ಜಿಲ್ಲೆ ಅತ್ಯಂತ ಹಿಂದುಳಿದಿದೆ ಎಂಬುದನ್ನು ಗಮನಿಸಿದ ಮುಖ್ಯಮಂತ್ರಿಗಳು ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಜಿಲ್ಲೆಯನ್ನು ಪ್ರಗತಿ ಪಥದಲ್ಲಿ ಮುನ್ನಡೆಸುವಂತೆ ಸೂಚನೆ ನೀಡಿದರು.

ಹಾವೇರಿ ಜಿಲ್ಲೆ ಕೃಷಿ ಮತ್ತು ಪಶುಸಂಗೋಪನೆಯನ್ನು ಅವಲಂಬಿಸಿದೆ. ಸಣ್ಣ ರೈತರೇ ಇಲ್ಲಿ ಹೆಚ್ಚಾಗಿದ್ದಾರೆ. ಉದ್ಯೋಗ ಸೃಷ್ಟಿಸದೆ ಬೇರೆ ಮಾರ್ಗವಿಲ್ಲ. ಈ ಕುರಿತು ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ನಾಡಿನ ಜನತೆ ಬಹಳ ನಿರೀಕ್ಷೆಗಳನ್ನು ಇಟ್ಟುಕೊಂಡು ನಮ್ಮನ್ನು ಅಧಿಕಾರಕ್ಕೆ ತಂದಿದ್ದಾರೆ. ಈ ನಿರೀಕ್ಷೆಗಳಿಗೆ ತಕ್ಕಂತೆ ಅಧಿಕಾರಿಗಳು ಕ್ರಿಯಾಶೀಲರಾಗಿ ಕೆಲಸ ಮಾಡಬೇಕು. ಉದಾಸೀನ, ಬೇಜವಾಬ್ದಾರಿಯ ವರ್ತನೆ ಕಂಡುಬಂದರೆ ಸೂಕ್ತ ಕ್ರಮ ಎದುರಿಸಬೇಕಾಗುತ್ತದೆ. ಜನರ ನಿರೀಕ್ಷೆಗಳಿಗೆ ತಕ್ಕಂತೆ ಚುರುಕಾಗಿ, ದಕ್ಷವಾಗಿ ಕಾರ್ಯ ನಿರ್ವಹಿಸಿ ಎಂದು ಎಚ್ಚರಿಕೆಯ ಮಾತುಗಳನ್ನು ತಿಳಿಸಿದರು. ಸಭೆಯಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ, ಕಾನೂನು ಸಚಿವ ಎಚ್ ಕೆ ಪಾಟೀಲ, ಜವಳಿ ಸಚಿವ ಶಿವಾನಂದ ಪಾಟೀಲ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಡೆಪ್ಯುಟಿ ಸ್ಪೀಕರ್ ರುದ್ರಪ್ಪ ಲಮಾಣಿ, ಶಾಸಕ ಶ್ರೀನಿವಾಸ್ ಮಾನೆ, ವಿ ಪ ಮುಖ್ಯ ಸಚೇತಕರಾದ ಸಲೀಂ ಅಹಮದ್ ಮತ್ತು ಜಿಲ್ಲೆಯ ಎಲ್ಲಾ ಶಾಸಕರು ಉಪಸ್ಥಿತರಿದ್ದರು. ▶▶3ನೇ ಪುಟಕ್ಕೆ

### ಅಧಿಕಾರಿಗಳಿಗೆ ಖಡಕ್ ಸೂಚನೆ

ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಏನಾದರೂ ತೊಂದರೆಗಳಿವೆಯೇ ಎಂದು ಆಹಾರ ಇಲಾಖೆ, ಸಾರಿಗೆ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ಚೆಸ್ಕಾಂ ಅಧಿಕಾರಿಗಳನ್ನು ಪ್ರಶ್ನಿಸಿ, ಸಮರ್ಪಕ ಜಾರಿಗೆ ಸ್ಪಷ್ಟ ಸೂಚನೆ ನೀಡಿದರು. ಜಿಲ್ಲಾ ಆಸ್ಪತ್ರೆ, ಶಿಗ್ಗಾಂವಿ ಬಸ್ ನಿಲ್ದಾಣದ ಅವ್ಯವಸ್ಥೆ, ಅಂಗನವಾಡಿಗಳಿಗೆ ಕಳಪೆ ಮೊಟ್ಟೆ ಪೂರೈಕೆ, ಸೈಬರ್ ಕ್ರೈಂ ಪ್ರಕರಣಗಳ ಹೆಚ್ಚಳ, ಚರಂಡಿ ದುರವಸ್ಥೆ, ಕುಡಿಯುವ ನೀರಿನ ಸಮಸ್ಯೆ ಸೇರಿ ಮಾಧ್ಯಮಗಳಲ್ಲಿ ಬಂದ ವರದಿಗಳನ್ನು ಓದಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಆ ಕುರಿತಾಗಿ ಪ್ರಶ್ನಿಸಿ ಏನು ಕ್ರಮ ಕೈಗೊಂಡಿದ್ದೀರಿ ಎಂದು ಉತ್ತರ ಕೇಳಿದರು. ಸೂಕ್ತವಾಗಿ ಉತ್ತರಿಸದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ತಕ್ಷಣ ಸಮಸ್ಯೆಗಳನ್ನು ಬಗೆಹರಿಸುವಂತೆ ಸೂಚಿಸಿದರು.

ಹಾವೇರಿಗೆ ಪ್ರವೇಶ ಪಡೆಯುತ್ತಿದ್ದಂತೆ ಜಿಲ್ಲಾಸ್ಪತ್ರೆಗೆ ಧಿಡೀರ್ ಭೇಟಿ ನೀಡಿದ ಮುಖ್ಯಮಂತ್ರಿಗಳು, ಮಳೆಯಿಂದ ನೀರು ಸೋರುತ್ತಿದ್ದರೂ ಅದೇ ವಾರ್ಡ್‌ನಲ್ಲಿ ತಾಯಿ-ಮಕ್ಕಳಿಗೆ ಚಿಕಿತ್ಸೆ ಕೊಡುತ್ತಿದ್ದದ್ದನ್ನು ಮತ್ತು ಅಲ್ಲಿನ ಅವ್ಯವಸ್ಥೆಗಳನ್ನು ನೋಡಿ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಸರ್ಜನ್‌ರನ್ನು ತರಾಟೆಗೆ ತೆಗೆದುಕೊಂಡರು. ಬಳಿಕ ಕರ್ತವ್ಯಲೋಪಕ್ಕಾಗಿ ಆರೋಗ್ಯ ಇಲಾಖೆ ಕಾಮಗಾರಿ ವಿಭಾಗದ ಎಇಇ ಮಂಜಪ್ಪ ಅವರನ್ನು ಅಮಾನತುಗೊಳಿಸಿ ಸ್ಥಳದಲ್ಲೇ ಆದೇಶ ಹೊರಡಿಸಿದರು.

### ಸರಕಾರಿ ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರು /ತತ್ಸಮಾನ ವೃಂದದ ಶಿಕ್ಷಕರ ವರ್ಗಾವಣೆ

## ವರ್ಗಾವಣೆ ಕೌನ್ಸಿಲಿಂಗ್ ವೇಳಾಪಟ್ಟಿ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಗದಗ

2022-23ನೇ ಸಾಲಿನ ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು ಪ್ರೌಢಶಾಲಾ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು/ಅಧಿಕಾರಿಗಳ ಅಂತರ ವಿಭಾಗ ಮಟ್ಟದ ಕೋರಿಕೆ/ಪರಸ್ಪರ ವರ್ಗಾವಣೆಯನ್ನು ಜುಲೈ 26 ರಿಂದ ಆಗಸ್ಟ್ 11 ರವರೆಗೆ ಬೆಳಿಗ್ಗೆ 9 ಗಂಟೆಯಿಂದ ಆದ್ಯತಾ ಪಟ್ಟಿಯಲ್ಲಿರುವ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿರುವ ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಇವರ ಕಛೇರಿ(ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ-111ರಲ್ಲಿ)ಯಲ್ಲಿ ನಡೆಯಲಿದೆ. ವರ್ಗಾವಣೆ ಕೌನ್ಸಲಿಂಗ್ ವೇಳಾಪಟ್ಟಿ ಇಂತಿದೆ.

ಜುಲೈ 26 ರಂದು ಪ್ರೌಢಶಾಲಾ ಮುಖ್ಯೋಪಾಧ್ಯಾಯರ ವೃಂದದ ಅಂತರ ವಿಭಾಗ ಕೋರಿಕೆ ವರ್ಗಾವಣೆ, ಪ್ರೌಢಶಾಲಾ ಶಿಕ್ಷಕರ ವೃಂದ ಕೋರಿಕೆ ವರ್ಗಾವಣೆ ಜುಲೈ 27 ರಿಂದ 31 ರವರೆಗೆ, ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ ಕೋರಿಕೆ ವರ್ಗಾವಣೆ ಜುಲೈ 31 ರಿಂದ ಆಗಸ್ಟ್ 10 ರವರೆಗೆ, ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವೃಂದ-ಪರಸ್ಪರ ವರ್ಗಾವಣೆ ಆಗಸ್ಟ್ 11 ರಂದು ಜರುಗಲಿವೆ.

ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 111, ಗದಗ ಇಲ್ಲಿ ಸಂಪಕಿಸಬಹುದಾಗಿದೆ.

### ಯಾವುದೇ ಲೋಪದೋಷಗಳಾಗದಂತೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಡಿಸಿ ಸೂಚನೆ

## ವ್ಯವಸ್ಥಿತ, ಅರ್ಥಪೂರ್ಣ ಸ್ವಾತಂತ್ರ್ಯೋತ್ಸವ ಆಚರಣೆಗೆ ನಿರ್ಧಾರ




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಆಗಸ್ಟ್ 15 ರಂದು ಸ್ವಾತಂತ್ರೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಯಾವುದೇ ಲೋಪದೋಷಗಳಿಲ್ಲದಂತೆ ವ್ಯವಸ್ಥಿತವಾಗಿ ಆಚರಿಸಲು ವಿವಿಧ ಇಲಾಖೆಗಳ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರದಂದು ಜರುಗಿದ ಸ್ವಾತಂತ್ರೋತ್ಸವ ದಿನಾಚರಣೆಯ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸ್ವಾತಂತ್ರೋತ್ಸವ ಮುನ್ನಾ ದಿನ ಅಂದರೆ ಆಗಸ್ಟ್ 14 ಹಾಗೂ 15 ರಂದು ಎರಡು ದಿವಸಗಳ ಕಾಲ ಜಿಲ್ಲಾಡಳಿತ ಭವನದ ಸೇರಿದಂತೆ ವಿವಿಧ ಸರ್ಕಾರಿ ಕಟ್ಟಡಗಳು, ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಬೇಕು. ಅಂಗಡಿಗಳು, ಮಳಿಗೆಗಳ ಮುಂದೆ ಸ್ವಾತಂತ್ರೋತ್ಸವದ ದಿನಾಚರಣೆಯ ಬ್ಯಾನರ್ ಅಳವಡಿಕೆಗೆ ಕ್ರಮ ವಹಿಸಬೇಕು.

ಸ್ವಾತಂತ್ರೋತ್ಸವದ ಪ್ರಯುಕ್ತ ಆಗಸ್ಟ್ 15 ರಂದು ಬೆ.7.30 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ ಕಾರ್ಯಕ್ರಮ ಜರುಗುವುದು. ನಂತರ ಬೆ.9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ▶▶3ನೇ ಪುಟಕ್ಕೆ

## ಸಚಿವ ಎಚ್.ಕೆ.ಪಾಟೀಲ ಅವರ ಪರಿಷ್ಕೃತ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಪರಿಷ್ಕೃತ ಜುಲೈ 26 ರ ಪ್ರವಾಸ ವಿವರ.

ಜುಲೈ 26 ರಂದು ಬೆಳಗ್ಗೆ 10 ಗಂಟೆಗೆ ಗದುಗಿನ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಚೀನಾ-ಇಂಡೋ-ಪಾಕ್ ಹಾಗೂ ಕಾರ್ಗಿಲ ಯುದ್ಧದಲ್ಲಿ ಮಡಿದ ವೀರ ಯೋಧರಿಗೆ ಗೌರವ ನಮನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಮಧ್ಯಾಹ್ನ 12 ಗಂಟೆಗೆ ಅಂಬೇಡ್ಕರ್ ಭವನದಲ್ಲಿ ಪ್ರಜಾ ಪ್ರತಿನಿಧಿಗಳಿಗೆ ಏರ್ಪಡಿಸಿದ ತರಬೇತಿಯಲ್ಲಿ ಪಾಲ್ಗೊಳ್ಳುವರು.

ಸಂಜೆ 5 ರಿಂದ 6.30 ರವರೆಗೆ ಕಾಟನ್ ಸೇಲ್ ಸೋಸೈಯಟಿ ಆವರಣದಲ್ಲಿನ ಸಚಿವರ ಕಾರ್ಯಾಲಯದಲ್ಲಿ ಸಾರ್ವಜನಿಕರ ಭೇಟಿ ನಡೆಸುವರು. ನಂತರ ರಸ್ತೆ ಮೂಲಕ ರಾತ್ರಿ 9.40 ಗಂಟೆಗೆ ಹುಬ್ಬಳ್ಳಿಗೆ ತೆರಳಿ ಅಲ್ಲಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ಲಲಿತಕ್ಕ ಕೆರಿಮನಿಗೆ ವಿಶಿಷ್ಟ ಲೇಖಕಿ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ನಿ.ಶಿಕ್ಷಕಿ, ಸಾಹಿತಿ ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ.ಸಿ.ವಿ ಕೆರಿಮನಿ ಅವರ ಪತ್ನಿ ಲಲಿತಕ್ಕ ಸಿ ಕೆರಿಮನಿ ಅವರು ವಿಶಿಷ್ಟ ಲೇಖಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಮಂಗಳವಾರ ಬೆಂಗಳೂರಿನ ಕರ್ನಾಟಕ ಲೇಖಕಿಯರ ಸಂಘದ 44ನೇ ವಾರ್ಷಿಕೋತ್ಸವ ಮತ್ತು ದತ್ತಿ ಪ್ರಶಸ್ತಿ ಪ್ರಧಾನ ಸಮಾಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿದರು. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ. ಚಂದ್ರಶೇಖರ ಕಂಬಾರ, ಮಾಜಿ ಸಚಿವೆ ರಾಣಿ ಸತೀಶ್, ಡಾ. ಬಿ.ಎಂ ಆಶಾದೇವಿ, ಡಾ. ಎಚ್.ಎಲ್ ಪುಷ್ಪ, ಡಾ. ಬೈರಮಂಗಲ ರಾಮೇಗೌಡ ಅವರು ಪ್ರಶಸ್ತಿ ವಿತರಿಸಿದರು.

## ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ಸದುಪಯೋಗ ಪಡೆಯಲು ಕರೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು 2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ವಿವಿಧ ತೋಟಗಾರಿಕೆ ಬೆಳೆಗಳಿಗೆ ಮಂಜೂರಾತಿ ನೀಡಿದೆ. ಈ ಯೋಜನೆಯಡಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಿಗೆ ಮಾವು, ಪಪ್ಪಾಯ ಹಾಗೂ ದಾಳಿಂಬೆ ಅಧಿಸೂಚಿತ ತೋಟಗಾರಿಕೆ ಬೆಳೆಗಳಾಗಿವೆ.

ಗ್ರಾಮ ಹಾಗೂ ಬೆಳೆಗಳ ವಿವರ ಇಂತಿದೆ: ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ, ಕೊಗನೂರ, ಮಾಚೇನಹಳ್ಳಿ, ಶಿರಹಟ್ಟಿ( ಯು.ಎಲ್.ಬಿ)ಗಳಿಗೆ ಮಾವು; ಕಡಕೋಳ, ಮಜ್ಜೂರ ಗ್ರಾಮಗಳಿಗೆ ಮಾವು ಮತ್ತು ದಾಳಿಂಬೆ, ಮಾಗಡಿ ಗ್ರಾಮಕ್ಕೆ ಮಾವು, ಪಪ್ಪಾಯ, ವಡವಿ ಗ್ರಾಮಕ್ಕೆ ಪಪ್ಪಾಯ ಮತ್ತು ದಾಳಿಂಬೆ ಬೆಳೆಗಳು ಅಧಿಸೂಚಿತ ಬೆಳೆಗಳಾಗಿವೆ.

ಲಕ್ಷ್ಮೇಶ್ವರ ತಾಲೂಕಿನ ಆದರಹಳ್ಳಿ, ಬಾಲೆಹೊಸೂರ, ಗೊಜನೂರ, ▶▶3 ನೇ ಪುಟಕ್ಕೆ

## ಅತಿವೃಷ್ಟಿ ಪ್ರದೇಶಗಳಲ್ಲಿ ಸಚಿವರ ತಂಡದಿಂದ ಶೀಘ್ರವೇ ಸಮೀಕ್ಷೆ: ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಜ್ಯದಲ್ಲಿ ಮುಂಗಾರು ಮಳೆಯು ಜೂನ್ ತಿಂಗಳಿನಲ್ಲಿ ಕೊರತೆಯಾಗಿದ್ದು, ಜುಲೈ ತಿಂಗಳಿನಲ್ಲಿ ವಾಡಿಕೆಗಿಂತ ಹೆಚ್ಚಾಗಿ ಮಳೆಯಾಗಿದೆ. ರಾಜ್ಯದ ಎಲ್ಲ ಕಡೆಗಳಲ್ಲಿ ಉತ್ತಮ ಮಳೆಯಾಗುತ್ತಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹೇಳಿದರು.



ಮಂಗಳವಾರ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಹಾವೇರಿ ಜಿಲ್ಲೆಯಲ್ಲಿ ರೈತರಿಗೆ ಜೀವಹಾನಿಯಾದ ಬಗ್ಗೆ ವರದಿಯಾಗಿವೆ. 6 ರಿಂದ 7 ರೈತರಿಗೆ ಪ್ರಾಣಹಾನಿಯಾಗಿದೆ. ಹೀಗಾಗಿ ಇಲ್ಲಿಂದಲೇ ಸಮೀಕ್ಷೆ ಕೈಗೊಳ್ಳಲಾಗುವುದು. ಅತಿಯಾಗಿ ಮಳೆಯಾದ ಪ್ರದೇಶಗಳಿಗೆ ತಂಡವನ್ನು ಮಾಡಿಕೊಂಡು ಸಮೀಕ್ಷೆ ನಡೆಸಲಾಗುತ್ತದೆ. ಉಡುಪಿ, ಮಂಗಳೂರು ಹಾಗೂ ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡುತ್ತೇನೆ. ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಇಂದು ಕೊಡಗು ಜಿಲ್ಲೆಯಲ್ಲಿ ಸಮೀಕ್ಷೆ ಕೈಗೊಂಡಿರುತ್ತಾರೆ. ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿ ಅವರು ಹಾವೇರಿ ಜಿಲ್ಲೆಗೆ ಭೇಟಿ ನೀಡುತ್ತಿದ್ದಾರೆ. ಪ್ರಕೃತಿ ವಿಕೋಪಗಳು, ಪ್ರವಾಹಗಳು, ಮಳೆ ಕೊರತೆ ಸಹಜವಾಗಿ ಆಗುತ್ತವೆ. ಜಗತ್ತಿನೆಲ್ಲೆಡೆ ಹವಾಮಾನ ಬದಲಾವಣೆ ಆಗುವುದು ಸಹಜ ಎಂದರು.

ಕರ್ನಾಟಕ ▶▶3ನೇ ಪುಟಕ್ಕೆ

## ಡಾ.ಶರಣು ಗೋಗೇರಿ ಅವರಿಗೆ ಸನ್ಮಾನ


■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ಡಾ.ಶರಣು ಗೋಗೇರಿ ಅವರಿಗೆ ಗದುಗಿನ ವೀರೇಶ್ವರ ಪುಣ್ಯಾಶ್ರಮದ ಗುರು ಬಂಧುಗಳು ಸನ್ಮಾನಿಸಿ ಗೌರವಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಡಾ.ಗೋಗೇರಿ ಅವರು ಶಿಕ್ಷಣ ಇಲಾಖೆಯಲ್ಲಿ ಸೇವೆ ಮುಂದುವರೆಸಿ, ಇದೀಗ ಕ್ರೀಡಾ ಇಲಾಖೆಯ ಅಧಿಕಾರಿಯಾಗಿರುವದು ಸಂತೋಷದ ಸಂಗತಿ ಎಂದು ಹಿರಿಯ ಕಲಾವಿದರಾದ ಸಿದ್ದೇಶ್ವರ ಶಾಸ್ತ್ರಿ ತೆಲ್ಲೂರ ಹೇಳಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಶರಣು ಅವರು, ವೀರೇಶ್ವರ ಪುಣ್ಯಾಶ್ರಮದ ಮೂಲಕ ಅಸಂಖ್ಯಾತ ಸಂಗೀತ ಕಲಾವಿದರು ಹೊರಹೊಮ್ಮಿದ್ದು, ಆಶ್ರಮದ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿಯೂ ಮುನ್ನಡೆ ಸಾಧಿಸಿರುವದು ಹೆಮ್ಮೆಯ ಸಂಗತಿ ಎಂದರು. ಈ ಸಂದರ್ಭದಲ್ಲಿ ಹಿರಿಯ ಕಲಾವಿದರಾದ ವೀರೇಶ ಕಿತ್ತೂರ, ಎಂ.ಜಿ ಗುರುಸಿದ್ದೇಶ್ವರ ಶಾಸ್ತ್ರೀ ಬೇವೂರ, ಮಹಾದೇವಪ್ಪ ಹಳ್ಳಿ, ಶರಣಪ್ಪ ಗದಗ ಮುಂತಾದವರಿದ್ದರು.



### ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಆಯೋಗದಿಂದ ತೀರ್ಪು

## ಸೇವಾ ನ್ಯೂನತೆ ಎಸಗಿದ ಜೀವವಿಮಾ ಕಂಪನಿಗೆ ದಂಡ




■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕ ಕನಗಿನಹಾಳ ಗ್ರಾಮದ ನಿವಾಸಿ ಮಂಜುನಾಥ ಯಲ್ಲಪ್ಪ ಮಲಕಶೆಟ್ಟಿ ಇವರು ಶ್ರೀರಾಮ ಜೀವ ವಿಮಾ ಕಂಪನಿ ನಿಯಮಿತ, ಗದಗ ಇವರಲ್ಲಿ 28-01-2020ರಂದು ರೂ.4,73,625ಗಳಿಗೆ ವಿಮೆ ಪಡೆದಿದ್ದು, 10-04-202ರಂದು ಸೆಪ್ಟಿಕ್ ಟು ಸೆಪ್ಟಿಕ್ ಶಾಕ್‌ನಿಂದ ಮರಣ ಹೊಂದಿದರು. ಮೃತನ ಪತ್ನಿ, ಮಕ್ಕಳು ಮರಣ ಉತಾರ ಪಾಲಿಸಿಯೊಂದಿಗೆ ವಿಮಾ ಕಂಪನಿಗೆ ವಿಮೆ ಹಣ ಕೊಡಲು ಕೋರಿದ್ದರು. ವಿಮಾ ಕಂಪನಿ ಪರವಾಗಿ ಸರ್ವೆಯರ್ ಸ್ಥಳಕ್ಕೆ ಭೇಟಿ ನೀಡಿ ವಿಚಾರಣೆ ಮಾಡಿ ವೈದ್ಯಕೀಯ ದಾಖಾಲೆ ಪಡೆದ ನಂತರ, ಮೃತನು ಲಿವರ್ ಸಂಬಂಧಿತ ಖಾಯಿಲೆಯಿಂದ ಬಳಲುತ್ತಿದ್ದು, ಸದರಿ ವಿಷಯವನ್ನು ವಿಮೆ ಪಡೆಯುವಾಗ ಹೇಳದೆ ಬಚ್ಚಿಟ್ಟು ಮೋಸದಿಂದ ವಿಮೆ ಪಡೆದಿದ್ದನು ಎಂದು ವರದಿ ಸಲ್ಲಿಸಿದ್ದು, ವಿಮಾ ಕಂಪನಿ ಸದರಿ ವರದಿ ಆಧಾರದ ಮೇಲೆ ದಾಖಲೆಗಳನ್ನು ಪರಿಶೀಲಿಸದೆ, ವಿಮೆ ಹಣ ಕೊಡಲು ನಿರಾಕರಿಸಿತ್ತು.

ಅನಿವಾರ್ಯವಾಗಿ, ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ನೀಡಿ, ವಿಮಾ ಕಂಪನಿಯವರು ಸೇವಾ ನ್ಯೂನತೆ ಎಸಗಿದ್ದು, ವಿಮಾ ಹಣ ಕೊಡಲು ▶▶3ನೇ ಪುಟಕ್ಕೆ

## ಸಾಧನೆಗೆ ಬಡತನ ಶಾಪವಾಗದು: ಎಸ್ ವಿ ಸಂಕನೂರ



■ವಿಜಯಸಾಕ್ಷಿ ಸುದ್ದಿ, ಗದಗ

ಬಡತನ ಎಂದೂ ಸಾಧನೆ ಮಾಡಲು ಅಡತಡೆ ಮಾಡುವುದಿಲ್ಲ ಮತ್ತು ಅದು ಶಾಪವಾಗುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎಸ್ ವಿ ಸಂಕನೂರ ಅಭಿಪ್ರಾಯಪಟ್ಟರು.

ಗದಗ-ಬೆಟಗೇರಿ ಇತಿಹಾಸದಲ್ಲಿ ಏಕಕಾಲಕ್ಕೆ ಸಿಎ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ, ಗದಗ ಜಿಲ್ಲೆಗೆ ಕೀರ್ತಿ ತಂದ ಪ್ರತಿಭಾನ್ವಿತರಾದ ಜೈಕಿಶನ್ ಕಬಾಡಿ, ವಿನಾಯಕ ಮೇರವಾಡೆ, ನಿಕಿಲ್ ಹಬೀಬ ಹಾಗೂ ಆಫ್ರೀನ್ ಮುಲ್ಲಾ ಇವರನ್ನು ತಮ್ಮ ಗೃಹ ಕಚೇರಿಯಲ್ಲಿ ಸನ್ಮಾನಿಸಿ ಅವರು ಮಾತನಾಡಿದರು.

ಜೀವನದಲ್ಲಿ ಪ್ರಯತ್ನ ಹಾಗೂ ಪರಿಶ್ರಮದಿಂದ ಏನೆಲ್ಲಾ ಸಾಧಿಸಬಹುದು. ಈ ದಿಶೆಯಲ್ಲಿ ಸನ್ಮಾನಿತರೆಲ್ಲರೂ ಮದ್ಯಮ ವರ್ಗದ ಕುಟುಂಬಗಳಿಂದ ಬಂದವರಿದ್ದರೂ, ಸತತ ಹೋರಾಟದ ಮೂಲಕ ಇನ್ನೂ ಹೆಚ್ಚಿನ ಸ್ಥಾನಕ್ಕೆ ಏರಬೇಕೆಂದು ಹಾರೈಸಿದರು.

ಎಎಸ್‌ಎಸ್ ಕಾಲೇಜಿನ ಪ್ರಾಚಾರ್ಯ ರವಿ ಕುಲಕರ್ಣಿ, ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು. ಸಮಾರಂಭದಲ್ಲಿ ಅಂಜುಮನ್ ಕಾಲೇಜಿನ ಉಪನ್ಯಾಸಕ ರವಿ ಜೀವನಗೌಡ್ರ, ಗ್ರಂಥಪಾಲಕ ಕುಮಾರಸ್ವಾಮಿ ಹಿರೇಮಠ, ಸಮಾಜ ಸೇವಕ ರವಿ ಶಿದ್ಲಿಂಗ್, ಗಿರೀಶ ಕಬಾಡಿ ಉಪಸ್ಥಿತರಿದ್ದರು. ನಿವೃತ್ತ ಮುಖ್ಯೋಪಾಧ್ಯಾಯ ಎನ್ ವಿ ಜೋಷಿ ಸ್ವಾಗತಿಸಿದರು. ಉಪನ್ಯಾಸಕ ಜಗದೀಶ ನರಗುಂದ ವಂದಿಸಿದರು.

## ಸಾಕ್ಷಿ ಸುಭಾಷಿತ

**ಶಾಲೆಯಲ್ಲಿ ಏನು ಕಲಿತೆವು ಎಂಬುದನ್ನು ಮರೆತ ನಂತರವೂ ಉಳಿಯುವುದೇ ವಿದ್ಯೆ.**

**–ಐನ್‌ಸ್ಟೀನ್**

## ಸಂಪಾದಕೀಯ

# ಗ್ಯಾರಂಟಿ ಜಾರಿಗಾಗಿ ಸುಮ್ಮನಿರಿ

ಕಾಂಗ್ರೆಸ್ ಸರಕಾರದಲ್ಲಿ ಅಸಮಾಧಾನ ಟಿಸಿಲೊಡೆದಿದೆ. ಸರಕಾರದ ಮಂತ್ರಿಗಳ ವಿರುದ್ಧ ಶಾಸಕರು ಪತ್ರ ಬರೆದಿದ್ದಾರೆ ಎನ್ನುವ ಸಂಗತಿ ರಾಜ್ಯ ರಾಜಕಾರಣದಲ್ಲಿ ಸಂಚಲನಕ್ಕೆ ಕಾರಣವಾಗಿದೆ.

ಸದ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಅವರು, ಶಾಸಕರು ದೂರು ನೀಡಿಲ್ಲ ಎನ್ನುತ್ತಲೇ, ಶಾಸಕರನ್ನು ಸಮಾಧಾನ ಪಡಿಸಲು ಮುಂದಾಗಿರುವುದು ಕೈ ಪಾಳಯದಲ್ಲಿ ಎಲ್ಲವೂ ಸರಿಯಿಲ್ಲ ಎನ್ನುವುದಕ್ಕೆ ಪುಷ್ಟಿ ನೀಡುತ್ತಿದೆ.

ಸಿಎಂ, ಡಿಸಿಎಂ ಶಾಸಕರ ಪತ್ರ ವಿಚಾರವನ್ನು ನಿರಾಕರಿಸುತ್ತಿದ್ದರೂ ಶಾಸಕರಲ್ಲಿ ಅಸಮಾಧಾನ ಇರುವುದು ನಿಜ ಎನ್ನುವುದನ್ನು ಬಸವರಾಜ ರಾಯರೆಡ್ಡಿ ಒಪ್ಪಿಕೊಂಡಿದ್ದಾರೆ. ಶಾಸಕರಲ್ಲಿ ಅಸಮಾಧಾನ ಇರುವುದು ನಿಜ ಎನ್ನುವುದನ್ನು 30ಕ್ಕೂ ಹೆಚ್ಚು ಶಾಸಕರು ತಮ್ಮ ಆಪ್ತರ ಬಳಿ ಹೇಳಿಕೊಂಡಿರುವುದು ಗುಟ್ಟಾಗಿ ಉಳಿದಿಲ್ಲ.

ಶಾಸಕರು ಸಚಿವರ ವಿರುದ್ಧ ಹಲವಾರು ಆರೋಪಗಳನ್ನ ಮಾಡಿದ್ದಾರೆ. ಮುಖ್ಯವಾಗಿ ತಮ್ಮ ಕ್ಷೇತ್ರದ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಸಚಿವರು ನಿರಾಸಕ್ತಿ ತೋರಿಸುತ್ತಿದ್ದಾರೆ. ಇನ್ನೊಂದು, ವರ್ಗಾವಣೆ ವಿಷಯದಲ್ಲಿ ಶಾಸಕರ ಮಾತಿಗೆ ಬೆಲೆ ಸಿಗದಿರುವುದು ಶಾಸಕರ ಅಸಮಾಧಾನಕ್ಕೆ ಕಾರಣ ಎನ್ನುವ ಸಂಗತಿ ಗಮನ ಸೆಳೆಯುತ್ತಿದೆ. ಶಾಸಕರ ಆರೋಪ ನಿಜ ಎನ್ನುವುದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆಯೊಂದು ಸಾಕ್ಷಿಯಾಗಿದೆ. ಶಾಸಕರು ನೂರಾರು ಕೋಟಿ ಅನುದಾನ ಕೇಳುತ್ತಿದ್ದಾರೆ. ಗ್ಯಾರಂಟಿ ಯೋಜನೆ ಜಾರಿಗಾಗಿ ಹಣಕಾಸು ಪರಿಸ್ಥಿತಿ ಸರಿದೂಗಿಸಲು ದೊಡ್ಡ ಯೋಜನೆ ಜಾರಿ ಮಾಡದಂತೆ ಡಿಕೆಶಿ ಫರ್ಮಾನು ಹೊರಡಿಸಿದ್ದಾರೆ. ಗ್ಯಾರಂಟಿ ಯೋಜನೆ ಜೊತೆಗೆ ಕ್ಷೇತ್ರದ ಹಲವಾರು ಅಭಿವೃದ್ಧಿ ಕಾರ್ಯಗಳಿಗೆ ಅನುದಾನದ ನಿರೀಕ್ಷೆ ಹೊಂದಿದ್ದ ಶಾಸಕರಿಗೆ ಸಹಜವಾಗಿ ನಿರಾಸೆಯಾಗಿದೆ. ಅದರಲ್ಲಿ ಸ್ವಹಿತಾಸಕ್ತಿ ಹೊಂದಿರುವ ಕೆಲ ಶಾಸಕರ ಪರಿಸ್ಥಿತಿ ನೀರಿನಿಂದ ಹೊರತೆಗೆದ ಮೀನಿನಂತಾಗಿದೆ. ಸದ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗ್ಯಾರಂಟಿ ಯೋಜನೆ ಜಾರಿ ಮಾಡುವುದು ಮೊದಲ ಆದ್ಯತೆ ಮತ್ತು ಅದಕ್ಕೆ ಅನುದಾನ ಒದಗಿಸುವ ಬಹುದೊಡ್ಡ ಸವಾಲು ಎದುರಿಸುತ್ತಿದ್ದಾರೆ. ಹೀಗಾಗಿ ಶಾಸಕರ ಅನುದಾನ ಕೋರಿಕೆಗೆ ಒಪ್ಪಿಗೆ ನೀಡುವುದಿಲ್ಲ. ಅದಕ್ಕೆ ಸಚಿವರೂ ಹೊರತಾಗಿಲ್ಲ. ಒಟ್ಟಾರೆ ಗ್ಯಾರಂಟಿಗಾಗಿ ಶಾಸಕರ ಅನುದಾನ ನಿರೀಕ್ಷೆ ಮಾಡುವುದು ಕಷ್ಟವಾಗಿದೆ. ಗ್ಯಾರಂಟಿಗಾಗಿ ಶಾಸಕರು ಸುಮ್ಮನಿರಬೇಕಾದ ಪರಿಸ್ಥಿತಿ ಬಂದಿದೆ.

**ಇಂದು( ಜುಲೈ 26) ಕಾರ್ಗಿಲ್ ವಿಜಯ ದಿವಸ್ ನಿಮಿತ್ತ ಲೇಖನ**

# ಕಾರ್ಗಿಲ್ ಹುತಾತ್ಮರಿಗೊಂದು ನಮನ

ಭಾರತೀಯರು ಎಂದೂ ಮರೆಯದ ಅವಿಸ್ಮರಣೀಯ ದಿನಗಳಲ್ಲಿ ಜುಲೈ 26 ಕೂಡಾ ಹೌದು. ಕಾರ್ಗಿಲ್ ಯುದ್ಧ ಭಾರತೀಯ ಪ್ರತಿಯೊಬ್ಬ ಪ್ರಜೆಯ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದೆ. ಜಮ್ಮು ಕಾಶ್ಮೀರದ ಕಾರ್ಗಿಲ್‌ನಲ್ಲಿ ನಡೆದ ಈ ಯುದ್ಧದಲ್ಲಿ ಪಾಕಿಸ್ತಾನವನ್ನು ನಮ್ಮ ಭಾರತದ ವೀರಯೋಧರು ಸದೆ ಬಡೆದು ಅವರು ಆಕ್ರಮಿಸಿಕೊಂಡಿದ್ದ ಸ್ಥಳವನ್ನು ವಶಕ್ಕೆ ಪಡೆದ ದಿನವಾಗಿದೆ. ಪ್ರತಿ ವರ್ಷ ಜುಲೈ 26ರಂದು ಕಾರ್ಗಿಲ್ ವಿಜಯ ದಿವಸ್‌ವನ್ನು ಆಚರಿಸಲಾಗುತ್ತದೆ. ಈ ವರ್ಷ ಕಾರ್ಗಿಲ್ ವಿಜಯ್ ದಿವಸ್‌ನ 24 ನೇ ವಾರ್ಷಿಕೋತ್ಸವ.

1999ರ ಜುಲೈ 26ರಂದು ಭಾರತೀಯ ಸೈನಿಕರು ಆಪರೇಶನ್ ವಿಜಯ್ ಮೂಲಕ ಕಾರ್ಗಿಲ್–ಡ್ರಾಸ್ ವಲಯದಲ್ಲಿ ಪ್ರದರ್ಶಿಸಿದ ಶೌರ್ಯದ ನೆನಪಿಗಾಗಿ ಈ ದಿನವನ್ನು ಆಚರಿಸಲಾಗುತ್ತದೆ. 1999 ಮೇ ತಿಂಗಳಿನಲ್ಲಿ ಆರಂಭವಾದ ಕಾರ್ಗಿಲ್ ಯುದ್ಧ ಜುಲೈ ಅಂತ್ಯದತನಕ ಅಂದರೆ ಸುಮಾರು ಎರಡು ತಿಂಗಳ ಕಾಲ ನಡೆಯಿತು. ಈ ಯುದ್ಧದಲ್ಲಿ ಲೇಹ್ ಹೆದ್ದಾರಿಯವರೆಗೆ ನುಗ್ಗಿ ಬಂದಿದ್ದ ಪಾಕ್ ಸೇನೆಯನ್ನು ಭಾರತೀಯ ಸೇನೆ ಯಶಸ್ವಿಯಾಗಿ ಹಿಮ್ಮೆಟ್ಟಿಸಿತ್ತು. ಈ ಯುದ್ಧದಲ್ಲಿ ಭಾರತೀಯ ಸೇನೆಯ ಅಧಿಕಾರಿಗಳು ಸೇರಿದಂತೆ ಸುಮಾರು 527 ಭಾರತೀಯ ಯೋಧರು ಹುತಾತ್ಮರಾದರು.




ಕಾರ್ಗಿಲ್ ಪ್ರದೇಶದಲ್ಲಿ ಭಾರತ ಮತ್ತು ಪಾಕಿಸ್ತಾನದ ಲೈನ್ ಆಫ್‌ಕಂಟ್ರೋಲ್ (ಎಲ್‌ಒಸಿ) ಇದೆ. ಈ ಪ್ರದೇಶದಲ್ಲಿ ಚಳಿಗಾಲದಲ್ಲಿ ಮೈನಸ್‌ಡಿಗ್ರಿ ಸೆಲ್ಸಿಯಸ್‌ಗೆ ಇಳಿಯುತ್ತದೆ. ಇದರಿಂದ ಇಲ್ಲಿ ಗಡಿ ಕಾಯುವುದು ಭಾರತಕ್ಕೆ ಸವಾಲಿನ ಕೆಲಸ. ಚಳಿಗಾಲದಲ್ಲಿ ಭಾರತೀಯ ಮತ್ತು ಪಾಕ್ ಸೈನಿಕರು ಇಲ್ಲಿಂದ ಸ್ಥಳಾಂತರಗೊಳ್ಳುತ್ತಾರೆ.

ಚಳಿಗಾಲ ಮುಗಿದ ಬಳಿಕ ಇಲ್ಲಿಗೆ ಮತ್ತೆ ಗಡಿಕಾಯುವುದಕ್ಕೆ ಹೋಗುವುದು ಹಿಂದಿನಿಂದ ನಡೆದುಕೊಂಡು ಬಂದ ಪದ್ಧತಿಯಾಗಿತ್ತು. 1999ರಲ್ಲಿ ಈ ಸಂದರ್ಭವನ್ನೇ ಬಳಸಿಕೊಂಡ ಪಾಕಿಸ್ತಾನ, ಕಾಶ್ಮೀರದ ಹೋರಾಟಗಾರರ ಹೆಸರಿನಲ್ಲಿ ಪಾಕ್ ಸೈನಿಕರು, ಭಾರತದ ಪ್ರಮುಖ ಭಾಗಗಳನ್ನು ತನ್ನ ವಶಕ್ಕೆ ಪಡೆದುಕೊಂಡಿತು.

ಆರಂಭದಲ್ಲಿ ಪಾಕಿಸ್ತಾನೀಯರು ಭಾರತದ ಒಳಗೆ ಸುಮಾರು ದೂರ ನುಸುಳಿದ್ದರು. ಆದರೂ ಅದು ಭಾರತೀಯ ಸೇನೆಯ ಅರಿವಿಗೆ ಬಂದಿರಲಿಲ್ಲ. ಆದರೆ ಪಾಕಿಸ್ತಾನಿಯರನ್ನು ಕಂಡ ಕಾಶ್ಮೀರದ ಕೆಲವು ಕುರಿಗಾಹಿ ಜನರು, ಭಾರತೀಯ ಸೇನೆಗೆ ವಿಷಯ ಮುಟ್ಟಿಸಿದ್ದರು. ತಕ್ಷಣವೇ ಕಾರ್ಯಪ್ರವೃತ್ತರಾದ ಸೇನಾಧಿಕಾರಿಗಳು ಐದು ಯೋಧರನ್ನು ಗಸ್ತು ತಿರುಗಲೆಂದು ಕಳುಹಿಸಿಕೊಟ್ಟರು.

ಆದರೆ ಆಕ್ರಮಣ ಮನಸ್ಥಿತಿಯಲ್ಲಿದ್ದ ಪಾಕ್‌ನ ಸೇನೆ, ಭಾರತದ ಆ ಐದು ಯೋಧರನ್ನು ಚಿತ್ರಹಿಂಸೆ ನೀಡಿ ಕೊಂದರು. ಇದನ್ನು ಗಂಭೀರವಾಗಿ ಪರಿಗಣಿಸಿದ ಭಾರತ ಸರ್ಕಾರ, ಇಪ್ಪತ್ತು ಸಾವಿರ ಭಾರತೀಯ ಸೈನಿಕರನ್ನ ಸಜ್ಜುಗೊಳಿಸಿ ಮೇ 3ರಿಂದ ಆಪರೇಷನ್ ವಿಜಯ ಹೆಸರಿನಲ್ಲಿ ಕಾರ್ಯಾಚರಣೆ ಆರಂಭಿಸಿತು.

ನಂತರ ಆಪರೇಷನ್ ಸಫೇದ್ ಸಾಗರ್ ಎಂಬ ಸಂಕೇತ ನಾಮದಿಂದ ಕಾರ್ಯಾಚರಣೆ ಪ್ರಾರಂಭಿಸಿದ ಭಾರತೀಯ ಸೇನೆ, ಪಾಕಿಸ್ತಾನದ ಸೈನಿಕರ ಮೇಲೆ ದಾಳಿ ಮಾಡಲು ಇಂಡಿಯನ್ ಮಿಗ್–21, ಮಿಗ್–27 ಮತ್ತು ಮಿರಾಜ್ 2000ನಂತಹ ಯುದ್ಧ ವಿಮಾನಗಳನ್ನು ಬಳಸಿತು. ಪಾಕ್ ಶತ್ರುಗಳನ್ನು ನಿರ್ಮೂಲನೆ ಮಾಡಲು ಐಎಎಫ್ ಯೋಧರು ಈ ವಿಮಾನಗಳಿಂದ ರಾಕೆಟ್ ಮತ್ತು ಕ್ಷಿಪಣಿಗಳನ್ನು ಹಾರಿಸಿದರು. ತೈಲ ಮತ್ತು ಇಂಧನ ಪೂರೈಕೆಯನ್ನು ನಿಲ್ಲಿಸಲು ಯುದ್ಧದ ಸಮಯದಲ್ಲಿ ಪಾಕಿಸ್ತಾನದ ಬಂದರುಗಳನ್ನು ನಿರ್ಬಂಧಿಸಲು ಭಾರತೀಯ ನೌಕಾಪಡೆ 'ಆಪರೇಷನ್ ತಲ್ವಾರ್' ಅನ್ನು ಪ್ರಾರಂಭಿಸಿತು.

ಇದರಿಂದಾಗಿ ಪಾಕಿಸ್ತಾನಿ ಸೇನೆಯನ್ನು ಹಿಮ್ಮೆಟ್ಟಿಸುವಲ್ಲಿ ಭಾರತ ಯಶಸ್ವಿಯಾಯಿತು. ಪಾಕಿಸ್ತಾನಿಗಳನ್ನು ಬಗ್ಗು ಬಡಿದ ಭಾರತೀಯ ಸೈನಿಕರು, ಜುಲೈ 24ರಂದು ಪಾಕಿಗಳನ್ನು ಹಿಮ್ಮೆಟ್ಟಿಸಿ ಯುದ್ಧ ಗೆದ್ದರು. ಇದಾದ ಬಳಿಕ ಪ್ರತೀ ವರ್ಷ ಜುಲೈ 26ರಂದು ಕಾರ್ಗಿಲ್ ವಿಜಯ ದಿವಸ್ ಅನ್ನು ಆಚರಣೆ ಮಾಡಲಾಗುತ್ತದೆ.



**– ಎಚ್ ಆರ್ ವಸ್ತ್ರದ್,**
ಧಾರವಾಡ.

### ಯುದ್ಧದ ಹಿಂದಿನ ಕಥೆ

1971ರ ಭಾರತ–ಪಾಕ್ ಯುದ್ಧದ ನಂತರ ಅನೇಕ ಮಿಲಿಟರಿ ಸಂಘರ್ಷಗಳು ನಡೆದಿವೆ. ಎರಡೂ ದೇಶಗಳು 1998ರಲ್ಲಿ ಪರಮಾಣು ಪರೀಕ್ಷೆಗಳನ್ನು ನಡೆಸಿದ್ದು, ಉದ್ವಿಘ್ನತೆಯನ್ನು ಮತ್ತಷ್ಟು ಹೆಚ್ಚಿಸಿತು. ಫೆಬ್ರವರಿ 1999ರಲ್ಲಿ ಪರಿಸ್ಥಿತಿಯನ್ನು ಶಾಂತಗೊಳಿಸಲು, ಕಾಶ್ಮೀರ ಸಂಘರ್ಷಕ್ಕೆ ಶಾಂತಿಯುತ ಮತ್ತು ದ್ವಿಪಕ್ಷೀಯ ಪರಿಹಾರವನ್ನು ಒದಗಿಸುವ ಭರವಸೆಯೊಂದಿಗೆ ಎರಡೂ ದೇಶಗಳು 'ಲಾಹೋರ್ ಘೋಷಣೆ'ಗೆ ಸಹಿ ಹಾಕಿದವು.

ಪಾಕಿಸ್ತಾನಿ ಸಶಸ್ತ್ರ ಪಡೆಗಳು ಮತ್ತು ಅರೆಸೈನಿಕ ಪಡೆಗಳ ಗಡಿ ನಿಯಂತ್ರಣ ರೇ–ಖೆಯ ಮೂಲಕ ಭಾರತದ ಭಾಗದಲ್ಲಿರುವ ಭೂಪ್ರದೇಶದೊಳಗೆ ನುಸುಳುವಿಕೆಯನ್ನು 'ಆಪರೇಷನ್ ಬದ್ರ್' ಎಂದು ಕೋಡ್–ಹೆಸರು ಮಾಡಲಾಯಿತು. ಕಾಶ್ಮೀರ ಮತ್ತು ಲಡಾಖ್ ನಡುವಿನ ಸಂಪರ್ಕವನ್ನು ಮುರಿಯುವುದು ಮತ್ತು ಸಿಯಾಚಿನ್ ಗ್ಲೇಸಿಯರ್‌ನಿಂದ ಭಾರತೀಯ ಸೇನೆಯನ್ನು ಹಿಂಪಡೆಯುವುದು ಇದರ ಮುಖ್ಯ ಉದ್ದೇಶವಾಗಿತ್ತು.

**ದೇಶ ಭಕ್ತಿ ಚಿಮ್ಮಿ–ಹೊಮ್ಮಿ ಉದ್ದೀಪನಗೊಳಿಸಿದ ಜೀವನ ಶ್ರೇಷ್ಠ ಘಳಿಗೆ**

# ಸಮರದ ಅಮರ ವೀರರನ್ನು ಸ್ಮರಿಸೋಣ

ಇಂದಿಗೆ ಸರಿಯಾಗಿ 24 ವರ್ಷಗಳ ಹಿಂದೆ ಪ್ರತಿಯೊಬ್ಬ ಭಾರತೀಯನ ದಮನಿ–ದಮನಿಗಳಲ್ಲಿ ಹೆಮ್ಮೆಯ ಭಾವ ಆವರಿಸಿಕೊಂಡಿತ್ತು. ಜಗತ್ತನ್ನೇ ಗೆದ್ದ, ಜಗದ ಮುಂದೆ ಎದೆಯುಬ್ಬಿಸಿ ನಡೆದ, ದೇಶ ಭಕ್ತಿ ಚಿಮ್ಮಿ–ಹೊಮ್ಮಿ ಉದ್ದೀಪನಗೊಳಿಸಿದ ಜೀವನ ಶ್ರೇಷ್ಠ ಗಳಿಗೆಯದು. ಅದಕ್ಕೆ ಕಾರಣ ಕಾರ್ಗಿಲ್ ಯುದ್ಧ ಗೆದ್ದ ನಮ್ಮ ಸಮರವೀರರು. ಆ ಕ್ಷಣವನ್ನು ಸಂಭ್ರಮಪಡುವ ಹಾಗೂ ಸಮರದಲ್ಲಿ ಅಮರರಾದ ವೀರ ಸೈನಿಕರನ್ನು ನೆನೆದು ಪಾವನರಾಗುವ ದಿನವೇ ಕಾರ್ಗಿಲ್ ವಿಜಯ ದಿನ.

ಕಳೆದುಹೋದವರು, ಮಂಜಿನಲ್ಲಿ ಹುದುಗಿಹೋದವರು ಅಥವಾ ಪಾಕಿಸ್ತಾನದ ಸೇನೆಗೆ ಬಲಿಯಾದ ನಮ್ಮ ವೀರ ಸೈನಿಕರೆಲ್ಲರೂ ಭಾರತಮಾತೆಯ ಮಕುಟ ರತ್ನಗಳು. ಈ ಎಲ್ಲರ ಆತ್ಮಗಳಿಗೆ ಶಾಂತಿ ದೊರೆಯುವುದು ನಮ್ಮ ದೇಶವು ಸುರಕ್ಷಿತವಾದ ಗಡಿಯ ನೆರಳಿನಡಿ ನೆಮ್ಮದಿಯ ನಿಟ್ಟುಸಿರು ಪಡೆದಾಗಲೇ.



ಅದೇ 'ವಿಜಯ ದಿನ'ದ ನಿಜವಾದ ಸಾರ್ಥಕತೆ.

ಶ್ರೀನಗರದಿಂದ ಸುಮಾರು 205 ಕಿ.ಮೀ. ದೂರದಲ್ಲಿರುವ ಸುಮಾರು 16 ಸಾವಿರ ಅಡಿ ಎತ್ತರದ ಹಿಮಚ್ಛಾದಿತ ಪರ್ವತ ಶ್ರೇಣಿಯಲ್ಲಿ, ಕಡಿದಾದ ಕಣಿವೆ ಪ್ರದೇಶದಲ್ಲಿ ಕಾರ್ಗಿಲ್ ಯುದ್ಧ ನಡೆದಿತ್ತು. ಇದು ಜಗತ್ತಿನ ಅತ್ಯಂತ ದುರ್ಗಮ ಸ್ಥಳಗಳಲ್ಲಿ ಒಂದಾಗಿದೆ. ಪರ್ವತ ಶ್ರೇಣಿಯ ಮೇಲಿದ್ದ ಪಾಕ್ ಪಡೆಗಳು ಸುಲಭವಾಗಿ ಭಾರತೀಯ ಸೈನಿಕರ ಚಲನವಲನ ಗುರುತಿಸಿ ಅವರ ಮೇಲೆ ಬಾಂಬ್, ಶೆಲ್ ದಾಳಿ ನಡೆಸುತ್ತಿದ್ದರು. ಪಾಕ್ ಯೋಧರ ಕಣ್ಣಿಗೆ ಬೀಳದಂತೆ ಭೀಕರ ಚಳಿಯಲ್ಲಿ, ಶಸ್ತ್ರಾಸ್ತ್ರಗಳೊಂದಿಗೆ ದುರ್ಗಮ ಪರ್ವತಗಳನ್ನು ಏರುವುದು ಸವಾಲಿನ ಕೆಲಸವಾಗಿತ್ತು. ಆದರೆ ಈ ಎಲ್ಲ ಅಡೆ ತಡೆಗಳನ್ನು ಮೀರಿದ ಭಾರತೀಯ ಯೋಧರು ವೀರಾವೇಶದಿಂದ ಹೋರಾಡಿ ಗೆಲುವು ಸಾಧಿಸಿದರು

ಒಟ್ಟಾರೆ ಸುಮಾರು 2 ತಿಂಗಳ ಕಾರ್ಯಾಚರಣೆ ಬಳಿಕ ಪಾಕ್ ಆಕ್ರಮಿತ ಪ್ರದೇಶದ ಶೇ.75 ರಿಂದ ಶೇ.80ರಷ್ಟು ಭಾಗಗಳು ಮತ್ತೆ ಭಾರತದ ತೆಕ್ಕೆಗೆ ಬಂದಿದ್ದವು. ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿಯವರ ಚತುರ ರಾಜತಾಂತ್ರಿಕ ನಡೆಗಳ ಪರಿಣಾಮಗಾಗಿ ಅಂತಾರಾಷ್ಟ್ರೀಯ ಸಮುದಾಯಗಳ ಒತ್ತಡದಿಂದಾಗಿ ಇನ್ನುಳಿದ ಭಾಗಗಳಿಂದ ಪಾಕ್ ತನ್ನ ಸೇನೆಯನ್ನು ಹಿಂದಕ್ಕೆ ಕರೆಸಿಕೊಳ್ಳುವುದು ಅನಿವಾರ್ಯವಾಯಿತು. ಅಂತಿಮವಾಗಿ 1999ರ ಜುಲೈ 26ರಂದು ಪಾಕಿಸ್ತಾನದ ವಿರುದ್ಧ ಭಾರತ ವಿಜಯ ಸಾಧಿಸಿದೆ ಎಂದು ಘೋಷಿಸಲಾಯಿತು. ಈ ಗೆಲುವಿನ ಸ್ಮರಣಾರ್ಥ 'ಕಾರ್ಗಿಲ್ ವಿಜಯ ದಿವಸ'ವನ್ನು ಪ್ರತಿವರ್ಷವೂ ಆಚರಿಸಲಾಗುತ್ತದೆ.

2ನೇ ವಿಶ್ವಯುದ್ಧದ ಬಳಿಕ ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ಬಳಕೆ ಮಾಡಿದ ಯುದ್ಧ ಎಂದು ಕಾರ್ಗಿಲ್ ಯುದ್ಧ ಖ್ಯಾತಿ ಪಡೆದಿದೆ. ಅಲ್ಲದೇ ದೂರದರ್ಶನದಲ್ಲಿ ದೇಶಾದ್ಯಂತ ಪ್ರಸಾರವಾದ ಮೊದಲ ಯುದ್ಧ ಇದಾಗಿದೆ. ಜಗತ್ತಿನ ಅತ್ಯಂತ ದುರ್ಗಮ ಪ್ರದೇಶಗಳಲ್ಲಿ ನಡೆದ ಯುದ್ಧಗಳಲ್ಲಿ ಇದು ಕೂಡಾ ಒಂದು. ಕಾರ್ಗಿಲ್ ಯುದ್ಧದ ವೇಳೆಯಲ್ಲಿ ಸರ್ಕಾರ ಪ್ರತಿನಿತ್ಯ 15 ಕೋಟಿ ರೂ. ವೆಚ್ಚ ಮಾಡಿದ್ದು ಒಂದು ದಾಖಲೆಯೆನಿಸಿದೆ. 2 ಪರಮಾಣು ಸಶಸ್ತ್ರ ರಾಷ್ಟ್ರಗಳ ನಡುವೆ ನಡೆದ ಯುದ್ಧ ಇದಾಗಿದೆ.

ದೇಶಕ್ಕಾಗಿ ತಮ್ಮ ಪ್ರಾಣತ್ಯಾಗ ಮಾಡಿದ ಭಾರತೀಯ ವೀರರನ್ನು ಸ್ಮರಿಸಲು ಕಾರ್ಗಿಲ್ 'ವಿಜಯ ದಿವಸ'ವನ್ನು ದೇಶಾದ್ಯಂತ ಆಚರಿಸಲಾಗುತ್ತದೆ. ಪ್ರತಿ ವರ್ಷ ಭಾರತದ ಪ್ರಧಾನ ಮಂತ್ರಿಗಳು ನವದೆಹಲಿಯ ಇಂಡಿಯಾ ಗೇಟ್‌ನ ಅಮರ್ ಜವಾನ್ ಜ್ಯೋತಿಯಲ್ಲಿ ಸೈನಿಕರಿಗೆ ಗೌರವ ಸಲ್ಲಿಸುತ್ತಾರೆ. ಇಡೀ ಭಾರತ ಇಂದು ಅಮರವೀರರ ಸ್ಮರಣೆ ಮಾಡುತ್ತದೆ.



**– ಈಶ್ವರ ಎಸ್ ಮೆಡ್ಲೇರಿ.**
ಅಧ್ಯಕ್ಷರು, ಕಸಾಪ–ಲಕ್ಷ್ಮೇಶ್ವರ.

## ಕವನ

### ಬಹುಕೋಶದೊಳಗೆ ನೀ ಬಂದಾಗ

ಏಕಾಂಗಿಯ ಸರಳತೆಯಲ್ಲಿ
ಏಕಕೋಶವಾಗಿ
ಕಾಮನ ಬಿಲ್ಲ ಬಣ್ಣಗಳ
ರಂಗೇರಿಸಿ
ಬಹುಮುಖವಾಗಿ
ಛಾಪನ್ನು ಮೂಡಿಸಿದ
ನಿನ್ನ ಅವತಾರ ಮೆಚ್ಚಲೇಬೇಕು...



ಕೊಳೆಯದ ಕಸವಾಗಿ
ಹಾರಾಡಿ, ತೂರಾಡಿ
ಚೂರಾಗಿ ಜಠರದಲ್ಲಿ
ನೋವಿಗೂ ಕಾರಣವಾಗಿ
ಮಾರಣಾಂತಿಕ ರೋಗಗಳ
ತವರಾದರೂ ಬಿಡದ
ನಿನ್ನ ಅವತಾರ ಮೆಚ್ಚಲೇಬೇಕು.....

ಗೃಹದೊಳಗೆಲ್ಲಾ ನಿನ್ನದೇ
ಕಾರಾಬಾರು
ದವಾಖಾನೆಯೊಳಗೂ
ನಿಲ್ಲದ ದರ್ಬಾರು
ನಗರೀಕರಣದಲೂ
ಪಾತ್ರದಳಗಿನ ಪ್ರಮುಖ
ಬೇಡೆಂದರೂ ನುಗ್ಗುವ
ನಿನ್ನ ಅವತಾರ ಮೆಚ್ಚಲೇಬೇಕು....

ಹೋರಾಟ ನಿನ್ನ ತಡೆಗಾಗಿ
ಅಲ್ಲೂ ಬಿಂಬಿಸುವೆ
ನೀರ ಹಿಡಿಕೆಯಾಗಿ
ಜೀವ ಗುಟುಕಿನ ಕುರುಹಾಗಿ
ಸುಟ್ಟರೂ ಬೂದಿಯಾಗದೆ
ಮರುಬಳಕೆಯಾಗುವ
ನಿನ್ನ ಅವತಾರ ಮೆಚ್ಚಲೇಬೇಕು....

ಆಧುನೀಕರಣದ ಸೋಗು
ಅಲಂಕಾರದಲಿ ಬೀಗಿ
ಅಳಿದಷ್ಟು ಎದ್ದು ನಿಲ್ಲುವ
ಮರೆತಷ್ಟು ಕಣ್ಣಿಗೆ ಸುಳಿವ
ಆಕರ್ಷಣೆಯ ರೂಪಕ್ಕಿಳಿವ
ನಾನಾವತಾರಿಯ ವಿಶ್ವ ಜಾತ
ನಿನ್ನ ಅವತಾರ ಮೆಚ್ಚಲೇಬೇಕು......



**– ಸಿ ಎನ್ ಭಾಗ್ಯಲಕ್ಷ್ಮೀ ನಾರಾಯಣ, ಮೈಸೂರು.**

# ಕಬಡ್ಡಿ ಪಂದ್ಯಾವಳಿಯಲ್ಲಿ ಸಾಧನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಅವಳಿ ನಗರದ ಸೈಂಟ್ ಜಾನ್ಸ್ ಪ್ರೌಢಶಾಲೆಯ ರಜತ ಮಹೋತ್ಸವದ ನಿಮಿತ್ತ ಕಬಡ್ಡಿ ಪಂದ್ಯಾವಳಿಯನ್ನು ಏಹಮ್ಮಿಕೊಳ್ಳಲಾಗಿತ್ತು.

ಬಾಲಕರ 20 ತಂಡಗಳು ಹಾಗೂ ಬಾಲಕಿಯರ 12 ತಂಡಗಳು ಭಾಗವಹಿಸಿದ್ದವು.

ಈ ಸ್ಪರ್ಧೆಯಲ್ಲಿ ಹುಲಕೋಟಿಯ ಸಹಕಾರಿ ಶಿಕ್ಷಣ ಸಂಸ್ಥೆಯ ಮನೋಹರ ಅಮರಪ್ಪ ಇನಾಮತಿ ಪ್ರೌಢಶಾಲೆಯ ಕ್ರೀಡಾಳುಗಳು ಪ್ರಥಮ ಸ್ಥಾನ ಪಡೆದು ಶಾಲೆಯ, ಸಂಸ್ಥೆಯ ಕೀರ್ತಿ ಹೆಚ್ಚಿಸಿದ್ದಾರೆ. ಸಂಸ್ಥೆಯ ಅಧ್ಯಕ್ಷ ಆರ್ ಎಂ ಮೂಲಿಮನಿ, ಆಡಳಿತಾಧಿಕಾರಿ ಆರ್ ಎಸ್ ಪಾಟೀಲ, ಸ್ಥಾನಿಕ ಆಡಳಿತ ಮಂಡಳಿ ಅಧ್ಯಕ್ಷ ಯು ವಿ ಬೆಟಗೇರಿ, ಸದಸ್ಯರಾದ ಅಪ್ಪಣ್ಣ ಅ. ಇನಾಮತಿ, ಆಡಳಿತ ಮಂಡಳಿಯ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯ ಜಂಬುನಾಥ ಹರಿವಾಣ, ಸಹ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳಿಗೆ ಮತ್ತು ಮಾರ್ಗದರ್ಶನ ನೀಡಿದ ದೈಹಿಕ ಶಿಕ್ಷಕ ಎಂ ಎಸ್ ಅಂಗಡಿಯವರನ್ನು ಅಭಿನಂದಿಸಿದ್ದಾರೆ.

# ಅಧಿಕ ಮಾಸದ ಭಜನಾ ಸೇವೆ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಲ್ಲಿನ ಸಂಗೊಳ್ಳಿರಾಯಣ್ಣ ನಗರದಲ್ಲಿನ ಶ್ರೀಮತಿ ಶೈಲಾ ಕುಲಕರ್ಣಿಯವರ ಗೃಹದಲ್ಲಿ ಒಂದು ತಿಂಗಳ ಕಾಲ ಅಧಿಕ ಮಾಸದ ಪ್ರಯುಕ್ತ ಪ್ರತಿನಿತ್ಯ ಸಾಯಂಕಾಲ 4ರಿಂದ 6ರವರೆಗೆ ನಿರಂತರವಾಗಿ ಭಜನೆ, ಪೂಜೆ, ಆರತಿ ಕಾರ್ಯಕ್ರಮಗಳು ಅತ್ಯಂತ ವಿಜೃಂಭಣೆಯಿಂದ ಜರುಗುತ್ತಿದೆ.

ಈ ಭಜನಾ ಸೇವೆಯಲ್ಲಿ ಸಂಗೊಳ್ಳಿ ರಾಯಣ್ಣ ನಗರದಲ್ಲಿನ ಆಶೀರ್ವಾದ ಭಜನಾ ಮಂಡಳಿಯ ಸದಸ್ಯರಾದ ಮಂಗಲಾ ಫಡಕೆ, ರೋಹಿಣಿ ಜೋಶಿ, ಸುಮಿತ್ರಾಬಾಯಿ ಪರಾಂಡೆ, ಗಾಯತ್ರಿ ಕಪಲೇಶ್ವರ,



ವಾಸುಕಿ ಜೋಶಿ, ಜಯಶ್ರೀ ಆಶ್ರಿತ, ಸುಧಾ ಶರ್ಮಾ, ಗೀತಾ ಹೊಣ್ಣಾವರ, ಶೈಲಾ ಕುಲಕರ್ಣಿ, ನಂದಾ ಕುಲಕರ್ಣಿ, ರಾಧಾ ನಾಯಕ, ಶೈಲಜಾ ಶೂರ್ಪಲಿ, ಧನಶ್ರೀ ಫಡಕೆ, ಸಂಪದಾ ಹೊನ್ನಾವರ, ರೋಹಿಣಿ ಕುಲಕರ್ಣಿ, ಜ್ಯೋತಿ ಗೋಸಾವಿ, ಅರುಣಾ ಜಹಾಗಿರದಾರ, ಯಧೋಧಾ ಮುದಗಲ್, ವಿನಯಲಕ್ಷ್ಮೀ ದೇಶಪಾಂಡೆ, ಅಂಜನಾ ಗದಗಕರ, ಲಲಿತಾ ಬಾಗೇವಾಡಿ, ಶ್ರೇಯಾ ಕುಲಕರ್ಣಿ ಮುಂತಾದವರು ಪಾಲ್ಗೊಂಡು ಅಧಿಕ ಮಾಸದ ಪುಣ್ಯ ಪ್ರಾಪ್ತಿಗಾಗಿ, ವಿಶ್ವಕಲ್ಯಾಣಕ್ಕಾಗಿ ದೇವರ ನಾಮಾವಳಿ ಮತ್ತು ಭಜನೆಯನ್ನು ಮಾಡುವ ಮೂಲಕ ಸತ್ಸಂಗ ನೆರವೇರಿಸಿದರು.

# ಗಿರಿಸಿದ್ದೇಶ್ವರ ಶಿವಾಚಾರ್ಯರ ಅಗಲಿಕೆಗೆ ರಂಭಾಪುರಿ ಶ್ರೀಗಳ ಸಂತಾಪ



**■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಹೊನ್ನಾಳಿ ತಾಲೂಕಿನ ಹೊಟ್ಯಾಪುರ ಹಿರೇಮಠದ ಗಿರಿಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಗಿರಿಸಿದ್ಧೇಶ್ವರ ಶಿವಾಚಾರ್ಯರು ವೀರಶೈವ ಧರ್ಮ ಸಂಸ್ಕೃತಿ ಪ್ರಸಾರ ಮಾಡುತ್ತಾ ಆ ಭಾಗದ ಭಕ್ತ ಸಂಕುಲಕ್ಕೆ ಸನ್ಮಾರ್ಗ ದರ್ಶನ ಮಾಡುತ್ತಿದ್ದರು. ಶ್ರೀ ರಂಭಾಪುರಿ ಜಗದ್ಗುರುಗಳವರ ಹಲವಾರು ಸಮಾರಂಭಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಆಶೀರ್ವಾದ ಪಡೆದಿದ್ದನ್ನು ಮರೆಯುವಂತಿಲ್ಲ. ಸ್ನೇಹಜೀವಿಗಳಾಗಿದ್ದ ಅವರು, ಭಕ್ತರ ಪ್ರೀತಿಗೆ ಪಾತ್ರರಾಗಿದ್ದರು. ಅವರ ಅಗಲಿಕೆ ನೋವನ್ನುಂಟು ಮಾಡಿದೆ. ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಅಗಲಿದ ಅವರ ಪವಿತ್ರ ಆತ್ಮಕ್ಕೆ ಚಿರಶಾಂತಿ ನೀಡಲಿ. ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಶ್ರೀ ಮಠದ ಭಕ್ತರಿಗೆ ನೀಡಲೆಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪದಲ್ಲಿ ತಿಳಿಸಿದ್ದಾರೆ.

# ಪಾರ್ವತೆವ್ವ ದೇವಪ್ಪ ಆರಟ್ಟಿಯವರಿಗೆ ಶ್ರದ್ಧಾಂಜಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹಿರೇಹಂದಿಗೋಳ ಗ್ರಾಮದಲ್ಲಿ ಇತ್ತೀಚೆಗೆ ನಿಧನರಾಧ ದಿ.ಶ್ರೀಮತಿ ಪಾರ್ವತೆವ್ವ ಕೋಂ ದೇವಪ್ಪ ಆರಟ್ಟಿ ಅವರಿಗೆ ಗ್ರಾಮದ ವತಿಯಿಂದ ಶ್ರದ್ಧಾಂಜಲಿ ಸಭೆ ಜರುಗಿತು.



ಹೆಚ್‌ಸಿಇಎಸ್ ಕಾಲೇಜಿನ ಪ್ರಾಚಾರ್ಯ ಡಿ ಜಿ ಜೋಗಣ್ಣವರ ಮಾತನಾಡಿ, ದಿವಂಗತ ಶ್ರೀಮತಿ ಪಾರ್ವತೆವ್ವ ಆರಟ್ಟಿಯವರು ಬದುಕಿನುದ್ದಕ್ಕೂ ಸರಳ ವ್ಯಕ್ತಿತ್ವದ ಮಾತೃಹೃದಯಿಯಾಗಿದ್ದರು. ಗ್ರಾಮದ ಎಲ್ಲ ಸಮುದಾಯದವರೊಂದಿಗೆ ಅತ್ಯಂತ ಭಾವನಾತ್ಮಕ ಸಂಬಂಧವನ್ನು ಇಟ್ಟುಕೊಂಡಿದ್ದರು. ಸರಳ, ಸ್ವಭಾವದ ಆಧ್ಯಾತ್ಮಿಕ ಜೀವಿಯಾಗಿದ್ದರು. ಇವರು ಮಕ್ಕಳು ಸಹ ಊರಿನಲ್ಲಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಎಲ್ಲರೊಂದಿಗೆ ಒಳ್ಳೆಯ ಸಂಬಂಧವನ್ನು ಹೊಂದಿದ್ದಾರೆ. ಕುಟುಂಬಸ್ಥರೆಲ್ಲರೂ ಈಗಿನ ಆಧುನಿಕ ಜೀವನದಲ್ಲಿಯೂ ಜಿಲ್ಲೆಗೆ ಮಾದರಿ ಕುಟುಂಬವಾಗಿ ಬದುಕುತ್ತಿದ್ದಾರೆ ಎಂದರು.

ಗದಗ ತಾ ಪಂ ಮಾಜಿ ಅಧ್ಯಕ್ಷ ಎಂ ಐ ಪಾಟೀಲ್, ವಿ ಬಿ ಜಕ್ಕನಗೌಡ್ರ, ಡಿ ಜಿ ಜೋಗಣ್ಣವರ, ಡಿ.ಬಿ ಕರಿಗೌಡ್ರ, ಐ.ಎನ್ ತಡಸಿ, ಎಂ.ಎಚ್ ಮಡಿಕೇರಿ, ಎಂ.ಎಸ್ ಗುರುನಗೌಡ್ರ, ಆರ್.ಎಚ್ ಪಾಟೀಲ್, ಮೈಲಾರಪ್ಪ ಯಲಿಶೆಟ್ಟರ, ಬಸಪ್ಪ ಆರಟ್ಟಿ, ಎಸ್.ಎಂ ಬಳ್ಳೊಳ್ಳಿ, ಬಿ.ಕೆ ಆರಟ್ಟಿ, ಎಸ್.ಎಂ ಕರಿಗೌಡ್ರ, ಆಯ್. ಎನ್ ಕರಿಗೌಡ್ರ, ಬೂದಪ್ಪ ಜಿನಗಿ, ಶ್ರೀಮತಿ ಆರ್.ಎಂ ಕಿರೆಸೂರು ಸೇರಿದತೆ ಗ್ರಾಮದ ಹಿರಿಯರು, ಮಹಿಳೆಯರು, ಉಪಸ್ಥಿತರಿದ್ದು ಶ್ರದ್ಧಾಂಜಲಿ ಅರ್ಪಿಸಿದರು.

# ವೀರಶೈವ ವಧು–ವರರ ಸಮಾವೇಶ, ಉಚಿತ ಆರೋಗ್ಯ ತಪಾಸಣೆ

**■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ**

ನಗರದ ಸಹ್ಯಾದ್ರಿ ಕಾಲೇಜು ಹಿಂಭಾಗದಲ್ಲಿರುವ ಶ್ರೀ ಜಗದ್ಗುರು ಪಂಚಾಚಾರ್ಯ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ಆಗಸ್ಟ್ 4, ಶುಕ್ರವಾರದಂದು ಬೆಳಿಗ್ಗೆ 10 ಗಂಟೆಗ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ನಡೆಯಲಿದೆ. ಗೋಣಿಬೀಡು ಶ್ರೀ ಶೀಲಸಂಪಾದನಾಮಠದ ಡಾ. ಸಿದ್ಧಲಿಂಗ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ನಡೆಯುವ ಸಮಾರಂಭವನ್ನು ಮಾಜಿ ಉಪಮುಖ್ಯ ಮಂತ್ರಿ ಕೆಎಸ್ ಈಶ್ವರಪ್ಪನವರು ಉದ್ಘಾಟಿಸುವರು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ವಿಘ್ನೇಶ್ವರಯ್ಯ ನೀ.ಸೋಲಾಪುರ ನೇತೃತ್ವ ವಹಿಸುವರು. ಸಮಾರಂಭದಲ್ಲಿ ಶಿವಮೊಗ್ಗ ಶಾಸಕ ಚನ್ನಬಸಪ್ಪರನ್ನು ಸನ್ಮಾನಿಸಲಾಗುವುದು. ನಗರದ ಜಂಗಮ ಮತ್ತು ವೀರಶೈವ ಲಿಂಗಾಯತ ಸಂಘ ಸಂಸ್ಥೆಗಳು ಸಹಭಾಗಿತ್ವ ವಹಿಸಲಿವೆ. ಇದೇ ಸಂದರ್ಭದಲ್ಲಿ 2023ನೇ ಸಾಲಿನ ವೀರಶೈವ ವಧು–ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಸಮಾರಂಭದ ಅಂಗವಾಗಿ ಟಿಎಂಎಇಎಸ್ ಆಯುರ್ವೇದ ಮಹಾವಿದ್ಯಾಲಯದ ಆಡಳಿತಾಧಿಕಾರಿ ಜಿ.ಎ ಹಿರೇಮಠ ಇವರ ನಿರ್ವಹಣೆಯಲ್ಲಿ ನುರಿತ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ನಡೆಯಲಿದೆ. ಹೆಚ್ಚಿನ ವಿವರಗಳಿಗೆ ಮೊಬೈಲ್–9449831132, 9980006765 ಹಾಗೂ 9901837705 ಸಂಪರ್ಕಿಸುವಂತೆ ಐಟಿಐ.ಪ್ರಾಚಾರ್ಯ ಪರಮೇಶ್ವರಪ್ಪ ಡಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನೀವೂ ನಮ್ಮ ಜೊತೆ ಕೈಜೋಡಿಸಿ**

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ಅತಿವೃಷ್ಟಿ ಪ್ರದೇಶಗಳಲ್ಲಿ ಸಚಿವರ ತಂಡದಿಂದ ಶೀಘ್ರವೇ ಸಮೀಕ್ಷೆ: ಸಿದ್ದರಾಮಯ್ಯ

▶▶ಮೊದಲನೇ ಪುಟದಿಂದ

ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಉಚಿತವಾಗಿ ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸಬೇಕು. ಯಾರಾದರೂ ಹಣ ತೆಗೆದು-ಕೊಂಡ ಬಗ್ಗೆ ದೂರು ಸಲ್ಲಿಸಿದರೆ ಅಂತಹವರ ವಿರುದ್ಧ ಕಾನೂನು ರೀತಿಯಲ್ಲಿ ಕ್ರಿಮಿನಲ್ ಮೊಕದ್ದಮೆ ಹಾಕಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ ಸದಸ್ಯರಾದ ಜಗದೀಶ್ ಶೆಟ್ಟರ್, ಕಾನೂನು ಮತ್ತು ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್, ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್, ಶಾಸಕರಾದ ಎನ್.ಎಚ್.ಕೋನರೆಡ್ಡಿ, ಪ್ರಸಾದ ಅಬ್ಬಯ್ಯ ಸೇರಿದಂತೆ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

## ವ್ಯವಸ್ಥಿತ, ಅರ್ಥಪೂರ್ಣ ಸ್ವಾತಂತ್ರ್ಯೋತ್ಸವ ಆಚರಣೆಗೆ ನಿರ್ಧಾರ

▶▶ಮೊದಲನೇ ಪುಟದಿಂದ

ಕಾರ್ಯಕ್ರಮ ಜರುಗಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಅಂದು ಶಾಲಾ ಕಾಲೇಜು ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ತಪ್ಪದೇ, ಕಡ್ಡಾಯವಾಗಿ ಧ್ವಜಾರೋಹಣ ಸಮಾರಂಭಕ್ಕೆ ಹಾಜರಾಗಬೇಕು. ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದ್ದು, ಗಣ್ಯ ವ್ಯಕ್ತಿಗಳಿಗೆ ಶಿಷ್ಟಾಚಾರದನ್ವಯ ಆಸನದ ವ್ಯವಸ್ಥೆ ಹಾಗೂ ಸನ್ಮಾನ ಕಾರ್ಯಕ್ರಮಕ್ಕಾಗಿ ಸಹ ಸೂಕ್ತ ಆಸನದ ವ್ಯವಸ್ಥೆಗೆ ಕ್ರಮ ವಹಿಸಬೇಕು. ನಗರದ ಜಿಲ್ಲಾ ಕ್ರೀಡಾಂಗಣ ಸೇರಿದಂತೆ ಪ್ರಮುಖ ಬೀದಿ ಹಾಗೂ ವೃತ್ತಗಳ ಸ್ವಚ್ಛತೆ ಕುರಿತು ನಗರಸಭೆ ಪೌರಾಯುಕ್ತರು ನಿಗಾ ವಹಿಸಬೇಕು. ತುರ್ತು ಸೇವೆಗಾಗಿ ಅಂಬುಲೆನ್ಸ್ ವ್ಯವಸ್ಥೆಗೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ರಾಷ್ಟ್ರೀಯ ಹಬ್ಬವಾದ ಸ್ವಾತಂತ್ರ್ಯೋತ್ಸವ ಸಮಾರಂಭವನ್ನು ವಿಶೇಷ ಆಸಕ್ತಿಯಿಂದ ಆಚರಿಸಲು ಕ್ರಮ ವಹಿಸಬೇಕೆಂದರು.

ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ. ಅವರು ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದವರಿಗೆ ಸನ್ಮಾನಕ್ಕೆ ಆಯಾ ಇಲಾಖಾಧಿಕಾರಿಗಳು ಕ್ರಮ ವಹಿಸಬೇಕು. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಶಿಷ್ಟಾಚಾರದಂತೆ ಸಾರವಾಗಿ ಆಮಂತ್ರಣ ಪತ್ರಿಕೆ ಮುದ್ರಣ, ಅಲ್ಪೋಪಹಾರದ ವ್ಯವಸ್ಥೆ, ಪರೇಡ್ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ, ಧ್ವನಿವರ್ಧಕ ಸೇರಿದಂತೆ ಕಾರ್ಯಕ್ರಮದ ವೇದಿಕೆ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರವಿ ಗುಂಜೀಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕರಿಸಿದ್ದಪ್ಪ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬಸವಲಿಂಗಪ್ಪ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ಜಿ.ಬಿ.ಶಿರೋಳ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಅಧಿಕ ಮಾಸದ ಇಷ್ಟಲಿಂಗ ಮಹಾಪೂಜಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಅಭಿಮತ

# ಭೌತಿಕ ಬದುಕಿಗೆ ಧರ್ಮಾಚರಣೆ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಬೀದರ

ಜನ್ಮ ಜನ್ಮಗಳ ಪುಣ್ಯದ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಅರಿವು-ಆದರ್ಶಗಳಿಂದ ಬದುಕನ್ನು ಸಮೃದ್ಧಗೊಳಿಸಿಕೊಳ್ಳಬೇಕು. ಭೌತಿಕ ಬದುಕಿಗೆ ಆಧ್ಯಾತ್ಮದ ಅರಿವು ಮತ್ತು ಧರ್ಮಾಚರಣೆಯಿಂದ ಬಾಳು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಮಂಗಳವಾರ ತಾಲೂಕಿನ ಕೊಳ್ಳಾರ ಕೆ. ವ್ಯಾಪ್ತಿಯಲ್ಲಿ ಬರುವ ಶ್ರೀ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದಲ್ಲಿ ಜರುಗಿದ ಅಧಿಕ ಮಾಸದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವೀರಶೈವ ಧರ್ಮದಲ್ಲಿ ಗುರು ಕೊಟ್ಟ ಇಷ್ಟಲಿಂಗವನ್ನು ಸದಾ ಧರಿಸಿ ಪೂಜಿಸಿದರೆ ಒಂದೇ ಜನ್ಮದಲ್ಲಿ ಜೀವನ್ಮುಕ್ತಿ ಪ್ರಾಪ್ತವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ.

ಶ್ರೀ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದಿಂದ ಈ ಭಾಗದಲ್ಲಿ ಆಧ್ಯಾತ್ಮ ಚಿಂತನೆಗಳನ್ನು ಜನ ಮನಕ್ಕೆ ಮುಟ್ಟಿಸುವ ಉದ್ದೇಶ ಹೊಂದಿದೆ. ಕಾರ್ಯಕ್ರಮದ ಸಂಘಟಕರ ಶ್ರಮ ಸಾರ್ಥಕಗೊಂಡಿದೆ ಎಂದು ಹರುಷ ವ್ಯಕ್ತಪಡಿಸಿದರು.

ಸಮಾರಂಭ ಉದ್ಘಾಟಿಸಿದ ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಒತ್ತಡದಲ್ಲಿ ಸಿಲುಕಿರುವ ಮನುಷ್ಯನಿಗೆ ಮಾನಸಿಕ ಶಾಂತಿ, ನೆಮ್ಮದಿ ಇಲ್ಲದಂತಾಗಿದೆ. ಶ್ರೀ ಗುರುವಿನ ಮಾರ್ಗದರ್ಶನದಲ್ಲಿ ಎಲ್ಲರೂ ಬದುಕು ಕಟ್ಟಿಕೊಂಡು ಬಾಳಬೇಕಾಗುತ್ತದೆ.

ಶ್ರೀ ರಂಭಾಪುರಿ ಜಗದ್ಗುರುಗಳು 3 ದಿನಗಳ ಕಾಲ ಲೋಕ ಕಲ್ಯಾಣಕ್ಕಾಗಿ ಕೈಗೊಂಡ ಇಷ್ಟಲಿಂಗ ಪೂಜಾ ಕಾರ್ಯ ಎಲ್ಲ ಭಕ್ತರಿಗೆ ಸಂತೋಷ ತಂದಿದೆ ಎಂದರು. ಮೆಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ತಮಲೂರು ಶಿವಾನಂದ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಅಧ್ಯಕ್ಷತೆ ವಹಿಸಿದ್ದ ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಮಾತನಾಡಿ, ನಿರ್ಮಿಸುತ್ತಿರುವ ಸಮುದಾಯ ಭವನಕ್ಕೆ ರೂ. 10 ಲಕ್ಷ ಅನುದಾನ ನೀಡುವುದಾಗಿ ತಿಳಿಸಿದರು. ವಿ ಪ ಸದಸ್ಯ ರಘುನಾಥರಾವ್ ಮಲ್ಕಾಪುರೆ ಮಾತನಾಡಿದರು. ಸಮಾರಂಭದಲ್ಲಿ ಬೀದರ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ ಕೆ ಗಣಪತಿ ಪಾಲ್ಗೊಂಡು, ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. 80 ಜನ ವೀರಮಾಹೇಶ್ವರ ಜಂಗಮ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರ ಜರುಗಿತು. ಶ್ರೀ ಜಗದ್ಗುರು ರೇಣುಕಾಚಾರ್ಯ ಭವ್ಯ ಮಂದಿರವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಉದ್ಘಾಟಿಸಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿದರು.

> ಬದುಕು ಒಂದು ಸುಂದರ ಮನೆಯ ಕಿಡಕಿ ಇದ್ದಂತೆ. ಕಿಡಕಿ ತೆರೆದರೆ ಬೆಳಕು, ಇಲ್ಲದಿದ್ದರೆ ಕತ್ತಲು. ಹಾಗೆಯೇ ಮನುಷ್ಯ ಶ್ರಮಪಟ್ಟರೆ ಸುಖ, ಇಲ್ಲದಿದ್ದರೆ ದುಃಖ ತಪ್ಪಿದ್ದಲ್ಲ. ಪೆಟ್ಟು ತಿಂದ ಕಲ್ಲು ಸುಂದರ ಮೂರ್ತಿಯಾಗುತ್ತದೆ. ಪೆಟ್ಟು ಕೊಟ್ಟ ಸುತ್ತಿಗೆ ಸುತ್ತಿಗೆಯಾಗಿಯೇ ಉಳಿಯುತ್ತದೆ. ನೋವು ಕೊಡುವವರು ಹಾಗೆಯೇ ಇರುತ್ತಾರೆ. ನೋವುಂಡವರು ಜ್ಞಾನಿಗಳಾಗುತ್ತಾರೆ. ಸಂಸ್ಕಾರ-ಸಂಸ್ಕೃತಿಯ ಆಚರಣೆಯಿಂದ ಜೀವನ ಉಜ್ವಲಗೊಳ್ಳಲು ಸಾಧ್ಯ. ತಿಳಿದು ಬರುವುದು ಜನನ. ತಿಳಿಯದೇ ಬರುವುದು ಮರಣ. ತಿಳಿದು ಬದುಕುವುದೇ ನಿಜವಾದ ಜೀವನ.
> – ಡಾ.ವೀರಸೋಮೇಶ್ವರ ಜಗದ್ಗುರುಗಳು.
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

# ಜಿಲ್ಲೆಯನ್ನು ಪ್ರಗತಿ ಪಥದಲ್ಲಿ ಮುನ್ನಡೆಸಿ

▶▶ಮೊದಲನೇ ಪುಟದಿಂದ

### ಕಳಪೆ ಬೀಜದ ದೂರು: ಕ್ರಮಕ್ಕೆ ಸೂಚನೆ

ಜಿಲ್ಲೆಯಲ್ಲಿ ಕೃಷಿ ಮತ್ತು ಕೃಷಿ ಪೂರಕ ಚಟುವಟಿಕೆಗಳಿಗೆ ಸಮಸ್ಯೆ ಆಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು. ಔಷಧ, ಗೊಬ್ಬರದೊಂದಿಗೆ ಗುಣಮಟ್ಟದ ಬೀಜ ಸರಬರಾಜಾಗಬೇಕು. ಕಳಪೆ ಬೀಜದ ದೂರುಗಳು ಬಂದರೆ ಕೂಡಲೇ ಪತ್ತೆ ಹಚ್ಚಿ ಸೂಕ್ತ ಕ್ರಮ ಕೈಗೊಳ್ಳಬೇಕು. ರೈತರಿಂದ ದೂರು ಬಂದರೆ ನಿಮ್ಮನ್ನೇ ನೇರವಾಗಿ ಹೊಣೆ ಮಾಡಲಾಗುವುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಮತ್ತು ಉಪ ನಿರ್ದೇಶಕರಿಗೆ ಎಚ್ಚರಿಕೆ ನೀಡಿದರು.

ಡಿಸಿಸಿ ಬ್ಯಾಂಕ್ ಎಂಡಿ ಮತ್ತು ಸಹಕಾರ ಸಂಘಗಳ ಜಂಟಿ ನಿಬಂಧಕರು ಸಭೆಗೆ ಗೈರಾಗಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, ಸಭೆಯ ಸೂಚನೆ ಕೊಟ್ಟರೂ ಅವರು ಗೈರಾಗಿರುವುದಕ್ಕೆ ಕಾರಣ ಕೇಳಿ ನೋಟೀಸ್ ನೀಡಿ, ಮೂರು ದಿನಗಳಲ್ಲಿ ಸಮರ್ಪಕ ಉತ್ತರ ಬರದಿದ್ದರೆ ಅಮಾನತು ಮಾಡಿ ಎಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್ ಅವರಿಗೆ ಸಭೆಯಲ್ಲೇ ಸೂಚನೆ ನೀಡಿದರು.

### ಆಯವ್ಯಯ ಜಾರಿ

ಆಗಸ್ಟ್ 1ರಿಂದ ಬಜೆಟ್ ಜಾರಿಗೆ ಬರುತ್ತದೆ. ರೈತರ ಬಡ್ಡಿ ರಹಿತ ಸಾಲವನ್ನು 3ರಿಂದ 5 ಲಕ್ಷಕ್ಕೆ ಹೆಚ್ಚಿಸಿರುವುದನ್ನು ರೈತರ ಗಮನಕ್ಕೆ ತರಬೇಕು. ರೈತರಿಗೆ ಸಮಸ್ಯೆ ಆಗದಂತೆ 5 ಲಕ್ಷದವರೆಗೂ ಬಡ್ಡಿ ರಹಿತ ಸಾಲ ನೀಡಬೇಕು. ವಾರ್ಷಿಕ ಶೇ.3 ಬಡ್ಡಿ ದರದಲ್ಲಿ 15 ಲಕ್ಷದವರೆಗೂ ಸಾಲ ಸೌಲಭ್ಯವನ್ನು ರೈತರಿಗೆ ಒದಗಿಸಿಕೊಡಬೇಕು ಎಂದು ಸೂಚಿಸಿದರು.

ಆಯವ್ಯಯದಲ್ಲಿ ಘೋಷಿಸಿದಂತೆ ಆಗಸ್ಟ್ 1ರಿಂದ ಕೃಷಿಭಾಗ್ಯ ಯೋಜನೆಗೆ ಮರು ಚಾಲನೆ ನೀಡಬೇಕು. ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರ ನಡೆಸಿರುವ ಮೌಲ್ಯಮಾಪನದಲ್ಲಿ ಕೃಷಿಹೊಂಡಗಳಿಂದ ರೈತ ಸಮುದಾಯಕ್ಕೆ ಬಹಳ ಅನುಕೂಲವಾಗಿದೆ ಎನ್ನುವ ವರದಿ ಬಂದಿದೆ. ಕೃಷಿ ಯಂತ್ರಧಾರೆ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗುವಂತೆ ನೋಡಿಕೊಳ್ಳಲು ಸೂಚಿಸಿದರು.

## ಇಂದು ಗಣಪತಿ ದೇವಸ್ಥಾನದಲ್ಲಿ 'ಶಿವಶಕ್ತಿ ಪಂಜುರ್ಲಿ' ಯಕ್ಷಗಾನ


■ವಿಜಯಸಾಕ್ಷಿ ಸುದ್ದಿ, ಗದಗ

ಲೋಕ ಕಲ್ಯಾಣಾರ್ಥವಾಗಿ ಭಕ್ತರಿಗೆ ಅಧಿಕ ಮಾಸದ ಅಧಿಕ ಫಲ ದೊರೆಯಬೇಕೆಂಬ ಉದ್ದೇಶದಿಂದ ನಗರದ ಮಸಾರಿ ಭಾಗದಲ್ಲಿರುವ ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದ ಆವರಣದಲ್ಲಿರುವ ಸಿದ್ಧಿಪ್ರಭಾ ಸಭಾಭವನದಲ್ಲಿ ಇಂದು ಬುಧವಾರ 26-7-2023ರಂದು ಸಂಜೆ 6-30ಕ್ಕೆ "ಶಿವಶಕ್ತಿ ಪಂಜುರ್ಲಿ" ಯಕ್ಷಗಾನವನ್ನು ಉಚಿತವಾಗಿ ಹಮ್ಮಿಕೊಳ್ಳಲಾಗಿದೆ.

ಶ್ರೀ ಸಿದ್ಧಿ ವಿನಾಯಕ ಕೃಪಾಪೋಷಿತ ಹಟ್ಟಿಯಂಗಡಿ ಯಕ್ಷಗಾನ ಮಂಡಳಿ ಮೇಳದವರಿಂದ ರಾಜ್ಯದಲ್ಲಿ ಅತ್ಯಂತ ಆಕರ್ಷಕವಾಗಿ, ಜನಮೆಚ್ಚುಗೆಗೆ ಪಾತ್ರವಾಗುತ್ತಾ ಪ್ರದರ್ಶನಗೊಳ್ಳುತ್ತಿರುವ ಕಾಂತಾರಾ ಖ್ಯಾತಿಯ "ಶಿವಶಕ್ತಿ ಪಂಜುರ್ಲಿ" ಯಕ್ಷಗಾನವನ್ನು ಜನಾಪೇಕ್ಷೆಯಂತೆ ಇಂದು ಸಂಜೆ 6-30ಕ್ಕೆ ಸಮಯಕ್ಕೆ ಸರಿಯಾಗಿ ಖ್ಯಾತ ಕಲಾವಿದರಿಂದ ಪ್ರದರ್ಶನಗೊಳ್ಳುತ್ತಿದ್ದು ಆಸಕ್ತರು, ಕಲಾಭಿಮಾನಿಗಳು, ಯಕ್ಷಗಾನ ಪ್ರಿಯರು ಸೇರಿದಂತೆ ಸರ್ವರೂ ವೀಕ್ಷಿಸಿ ದೈವ ಶಕ್ತಿಯ ಫಲವನ್ನು ಪಡೆದುಕೊಳ್ಳಬೇಕೆಂದು ಶ್ರೀ ಕೈಲಾಸ ವರಸಿದ್ಧಿ ಗಣಪತಿ ದೇವಸ್ಥಾನದ ಟ್ರಸ್ಟ್ ಅಧ್ಯಕ್ಷರಾದ ಬಿ.ಪ್ರಸನ್ನಕುಮಾರ ವಿನಂತಿಸಿದ್ದಾರೆ.







## 'ಮಳೆ ನೀರು ಸಂಗ್ರಹಣೆ ಜಾಗೃತಿ' ಭಾಷಣ, ಪ್ರಬಂಧ ಸ್ಪರ್ಧೆ



■ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ, ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಆದಿಶಕ್ತಿ ಯುವ ಮಂಡಲ ಇವುಗಳ ಸಂಯುಕ್ತಾಶ್ರಯದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ 'ಮಳೆ ನೀರು ಸಂಗ್ರಹಣೆ ಜಾಗೃತಿ' ಕುರಿತು ಭಾಷಣ ಮತ್ತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಕಾಲೇಜಿನ ಪ್ರಾಂಶುಪಾಲ ಎಮ್ ಬಿ ಕೊಳವಿಯವರು ಮಾತನಾಡಿ, ಮಳೆ ನೀರನ್ನು ಸಂಗ್ರಹಿಸಿ ಉಪಯೋಗಿಸಬಹುದು. ಇದರಿಂದ ನೀರಿನ ಅಭಾವ ಕಡಿಮೆಯಾಗುತ್ತದೆ ಎಂದು ತಿಳಿಸಿದರು. ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಅಲಿಯಾ ಜೈದಿ, ದ್ವಿತೀಯ ಸ್ಥಾನವನ್ನು ಸಯ್ಯದ್ ತಂಜಿಮ್, ತೃತೀಯ ಸ್ಥಾನವನ್ನು ನಿವೇದಿತಾ ಮುಧೋಳ ಪಡೆದುಕೊಂಡರು. ಪ್ರಭಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಬಸಮ್ಮ ಅಂಗಡಿ, ದ್ವಿತೀಯ ಸ್ಥಾನವನ್ನು ಭೀಮಾ ಹಿರೇಮನಿ, ತೃತೀಯ ಸ್ಥಾನವನ್ನು ಫೈಜಾ ಸುಲ್ತಾನ್ ಮತ್ತು ನಾಲ್ಕನೇ ಸ್ಥಾನವನ್ನು ಸಿಮರನ್ ಮುಲ್ಲಾ ಪಡೆದುಕೊಂಡರು.

ಸ್ಪರ್ಧೆಯಲ್ಲಿ ಪ್ರೊ. ಎಚ್.ಬಿ ಗೌಡರ್, ಪ್ರೊ. ಈ.ಎಮ್ ಮಠಪತಿ, ಕುಮಾರೇಶ್ವರ್ ಸಣ್ಣಕ್ಕಿ ನಿರ್ಣಾಯಕರಾಗಿ ತೀರ್ಪು ನೀಡಿದರು. ಕಾರ್ಯಕ್ರಮದಲ್ಲಿ ಎನ್.ರಂಜನಿ, ಡಾ.ವೀಣಾ, ವಿಠ್ಠಲ ಕೊಳ್ಳಿಯವರ್, ರವಿಕುಮಾರ್ ಹೊಂಬಾಳಿ, ವೀಣಾ ತಿರಲಾಪುರ್ ಮುಂತಾದವರು ಭಾಗವಹಿಸಿದ್ದರು.

## ಜು.28ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನವನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಎಸ್.ಡಿ.ಎನ್. ಪೂರ್ವ ಪ್ರಾಥಮಿಕ, ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ನೇರ ಸಂದರ್ಶನವನ್ನು ಜುಲೈ 28 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಇಂದಿರಾ ನಗರದ ಎಸ್.ಡಿ.ಎನ್. ಪೂರ್ವ ಪ್ರಾಥಮಿಕ, ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಆಸಕ್ತ ಬಿ.ಎಸ್.ಸಿ, ಬಿ.ಎಡ್ ಹಾಗೂ ಡಿ.ಎಡ್ ಪಾಸಾದ 18 ರಿಂದ 35 ವರ್ಷ ವಯೋಮಿತಿಯ ಮಹಿಳಾ ಅಭ್ಯರ್ಥಿಗಳು ಮಾತ್ರ ಭಾಗವಹಿಸಬಹುದು. ಅರ್ಹ ಅಭ್ಯರ್ಥಿಗಳು ತಮ್ಮ 1 ಭಾವಚಿತ್ರ, ಆಧಾರ ಕಾರ್ಡ್, ಬಯೋಡಾಟಾ (ರೆಸ್ಯೂಮ್)ಗಳ ಹೆಚ್ಚಿನ ಪ್ರತಿಗಳೊಂದಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು. https://surveyheart.com/form/64be253014735f6806ddfd9d ವೆಬ್ ಸೈಟ್ ಮುಖಾಂತರ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 0836-2225288, 9480869880, 8453208555 ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹರ್ತಿ ಗ್ರಾ ಪಂ ಅಧ್ಯಕ್ಷರಾಗಿ ದೇವಕ್ಕ ಅಸುಂಡಿ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಹರ್ತಿ ಗ್ರಾಮ ಪಂಚಾಯಿತಿಯ ಎರಡನೇ ಅವಧಿಗೆ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷೆಯಾಗಿ ದೇವಕ್ಕ ಬಿ ಅಸುಂಡಿ, ಉಪಾಧ್ಯಕ್ಷರಾಗಿ ರೇಣವ್ವ ಬಿ ತಳವಾರ ಆಯ್ಕೆಯಾದರು.

ಅಧ್ಯಕ್ಷ ಸ್ಥಾನ ಹಿಂದುಳಿದ ಅ ವರ್ಗ, ಉಪಾಧ್ಯಕ್ಷ ಸ್ಥಾನ ಎಸ್‌ಟಿ ಮಹಿಳಾ ಅಭ್ಯರ್ಥಿಗೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ದೇವಕ್ಕ ಅಸುಂಡಿ, ಹಾಲವ್ವ ಕೆ ಕುರಿ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ರೇಣವ್ವ ಬಿ ತಳವಾರ ನಾಮಪತ್ರ ಸಲ್ಲಿಸಿದ್ದರು. ನಂತರ ಜರುಗಿದ ಚುನಾವಣೆಯಲ್ಲಿ ದೇವಕ್ಕ ಅಸುಂಡಿ 12 ಮತಗಳನ್ನು ಪಡೆದು ಅಧ್ಯಕ್ಷರಾದರು. ಪ್ರತಿಸ್ಪರ್ಧಿ ಹಾಲವ್ವ ಕುರಿ 6 ಮತಗಳನ್ನು ಪಡೆಯುವ ಮೂಲಕ ಪರಾಭವಗೊಂಡರು. ಉಪಾಧ್ಯಕ್ಷ ಸ್ಥಾನಕ್ಕೆ ರೇಣವ್ವ ತಳವಾರ ಒಬ್ಬರೇ ನಾಮಪತ್ರ ಸಲ್ಲಿಸಿರುವುದರಿಂದ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಎಸ್ ಕೆ ಹವಾಲ್ದಾರ ಕಾರ್ಯ ನಿರ್ವಹಿಸಿದರು.

ಚುನಾವಣೆಯ ಸಂದರ್ಭದಲ್ಲಿ ಮುಖಂಡ ಬಿ ಟಿ ಸೋಮರೆಡ್ಡಿ, ಗ್ರಾ ಪಂ ಸದಸ್ಯರಾದ ಸೋಮರೆಡ್ಡಿ ನಡವೂರ, ಸೋಮರೆಡ್ಡಿ ರಡ್ಡೇರ, ಪಿ ಎಸ್ ಪಾಟೀಲ್, ಪ್ರಕಾಶ ಸಂಶಿ, ಮಾಹಾಂತಗೌಡ ಪಾಟೀಲ್, ಬಿ ಬಿ ಹೊನ್ನಪ್ಪನವರ, ಬಿ ಜಿ ಹೋನ್ನಪ್ಪನವರ, ಪ್ರಭು ಹುಡೇದ, ಪರಪ್ಪಾ ಕೋಳಿವಾಡ, ಶಂಕ್ರಪ್ಪಾ ಭಜಂತ್ರಿ, ರಾಮಣ್ಣಾ ಕಂತಿ, ಬಾಪು ಕಿಲ್ಲೇದಾರ, ಉಮೇಶ ಭಜೆಂತ್ರಿ, ಹನಮಂತಪ್ಪ ಬಂಡಿವಡ್ಡರ, ಮಂಜುನಾಥ ಸೊರಟೂರ, ಮಂಜುನಾಥ ಕುರ್ತಕೋಟಿ, ಪರಶುರಾಮ ಹಡಪದ, ಎ ಎಸ್ ಕೊಟ್ರಶೆಟ್ಟರ, ಕೆಂಪಣ್ಣಾ ಕೋರಿ, ಪಿಡಿಓ ಅಶೋಕ ಕಂಬಿ, ಕಾರ್ಯದರ್ಶಿ ಎಸ್ ಎಸ್ ಪ್ರಭಯ್ಯಮಠ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಇದ್ದರು.

## ಸೇವಾ ನ್ಯೂನತೆ ಎಸಗಿದ ಜೀವವಿಮಾ ಕಂಪನಿಗೆ ದಂಡ

▶▶ಮೊದಲನೇ ಪುಟದಿಂದ

ಕೋರಿ ಲಲಿತಾ ಮಲಕಶೆಟ್ಟಿ ದೂರು ಸಲ್ಲಿಸಿದ್ದರು. ವಿಮಾ ಕಂಪನಿಯವರು ಹಾಜರಾಗಿ ತಮ್ಮ ತಕರಾರಿನಲ್ಲಿ ಪುನಃ ಪರಿಹಾರ ಹಣ ಕೊಡಲು ಸಾದ್ಯವಿಲ್ಲ ಎಂದು ವಾದಿಸಿದ್ದರು.

ಆಯೋಗದ ಅಧ್ಯಕ್ಷ ಡಿ.ವಾಯ್. ಬಸಾಪುರ, ಸದಸ್ಯ ರಾಜು ನಾಮದೇವ ಮೇತ್ರಿ ಹಾಗೂ ಯಶೋಧಾ ಭಾಸ್ಕರ ಪಾಟೀಲ ಅವರನ್ನೊಳಗೊಂಡ ಪೀಠವು ಸುದೀರ್ಘ ವಿಚಾರಣೆ ಮಾಡಿ, ಮೃತ ಮಂಜುನಾಥ ಲಿವರ್ ಸಮಸ್ಯೆಯಿಂದ ಬಳುತ್ತಿದ್ದ ಕುರಿತು ಯಾವುದೇ ದಾಖಲೆ ಹಾಜರಪಡಿಸಿ ಸಾಬೀತು ಪಡಿಸಲು ವಿಮಾ ಕಂಪನಿ ವಿಫಲವಾಗಿದ್ದು, ಸೇವಾ ನ್ಯೂನತೆ ಎಸಗಿದ್ದು ಸಾಬೀತಾಗಿದೆ ಎಂದು ತೀರ್ಪು ನೀಡಿದೆ. ಮೃತನ ಪತ್ನಿ ಹಾಗೂ ಮಕ್ಕಳಿಗೆ ಶ್ರೀರಾಮ ವಿಮಾ ಕಂಪನಿ ರೂ.4,73,625ಗಳನ್ನು ಶೇ.9ರಂತೆ ಬಡ್ಡಿ ಕೊಡಲು ಆದೇಶಿಸಿದೆ. ದೂರುದಾರರು ಆಯೋಗಕ್ಕೆ ಅಲೆದಾಡಿ ಮಾನಸಿಕ ಹಿಂಸೆ ಅನುಭವಿಸಿದ್ದರಿಂದ, 25 ಸಾವಿರ ರೂ.ಗಳ ಹೆಚ್ಚಿನ ಪರಿಹಾರ ಹಾಗೂ ಪ್ರಕರಣದ ಖರ್ಚು 15 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ಮಾಡಿದೆ.



ಶಿರಹಟ್ಟಿ ತಾಲೂಕಿನ ಕೋಗನೂರ ಗ್ರಾಮ ಪಂಚಾಯತ ಅಧ್ಯಕ್ಷೆಯಾಗಿ ತಿರಕವ್ವ ಮೈಲಪ್ಪ ಹರಿಜನ ಹಾಗೂ ಉಪಾಧ್ಯಕ್ಷೆಯಾಗಿ ಕಸ್ತೂರವ್ವ ಮಾಂತೇಶ ತಳ್ಳಳ್ಳಿ ಆಯ್ಕೆಯಾದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಡಿ.ಕೆ ಹೊನ್ನಪ್ಪನವರ, ಗ್ರಾ ಪಂ ಮಾಜಿ ಅಧ್ಯಕ್ಷ ಜಡಿಯಪ್ಪ ಹೊನ್ನಪ್ಪನವರ, ಗುಡ್ಡಪ್ಪ ಸೋಮಣ್ಣನವರ, ದೇವಪ್ಪ ದೊಡ್ಡಮನಿ, ರವಿಕುಮಾರ ಹಿರೇಮಠ, ವಿರುಪಾಕ್ಷಪ್ಪ ಚನ್ನಮ್ಮನವರ, ಹನುಮಂತಪ್ಪ ದೊಡ್ಡಮನಿ, ಬೀರಪ್ಪ ಗುಡೂರ, ಶಂಬಣ್ಣ ಬಾಲೇಹೊಸೂರ, ಗುಡ್ಡಪ್ಪ ಮೇಲಿನಮನಿ, ಪ್ರಕಾಶ ದೊಡ್ಡಮನಿ, ಕುಮಾರಸ್ವಾಮಿ ಹಿರೇಮಠ, ಮಾದೇವಪ್ಪ ದೊಡ್ಡಮನಿ ಉಪಸ್ಥಿತರಿದ್ದರು.

### ಹಾವೇರಿ-ಗದಗ ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆ: ಮುರಿಗೆಪ್ಪ ಶೆಟ್ಟರ್ ಇಂಗಿತ

# ಬಿಜೆಪಿಯಿಂದ ಸ್ಪರ್ಧಿಸಲು ನಾನು ಸೂಕ್ತ ಅಭ್ಯರ್ಥಿ

■ವಿಜಯಸಾಕ್ಷಿ ಸುದ್ದಿ, ಗದಗ

ಜನಸಂಘ ಹಾಗೂ ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಬ್ಯಾಡಗಿ ತಾಲೂಕಿನಲ್ಲಿ ಕಳೆದ ನಾಲ್ಕು ದಶಕಗಳಿಂದ ಪಕ್ಷದ ಏಳಿಗೆಗೆ ಶ್ರಮಿಸಿದ್ದು, ಮುಂಬರುವ ಲೋಕಸಭಾ ಚುನಾವಣೆಗೆ ಬಿಜೆಪಿಯಿಂದ ಸ್ಪರ್ಧೆಗೆ ಇಳಿಯಲು ನಾನು ಸೂಕ್ತ ಅಭ್ಯರ್ಥಿಯಾಗಿದ್ದೇನೆ ಎಂದು ಮುರಿಗೆಪ್ಪ ಶೆಟ್ಟರ್ ಹೇಳಿದರು.




ಅವರು ಸೋಮವಾರ ನಗರದ ಪತ್ರಿಕಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬ್ಯಾಡಗಿ ಬಿಜೆಪಿ ಪಕ್ಷದ ಅಧ್ಯಕ್ಷನಾಗಿ 15 ವರ್ಷಗಳ ಕಾಲ ಹಾಗೂ ಜಿಲ್ಲಾ ಉಪಾಧ್ಯಕ್ಷರಾಗಿ, ರಾಜ್ಯ ಪರಿಷತ್ ಸದಸ್ಯನಾಗಿ ಮೂರು ಅವಧಿಗೆ, ಬ್ಯಾಡಗಿ ಪುರಸಭೆ ಸದಸ್ಯರಾಗಿ, ಅಧ್ಯಕ್ಷರಾಗಿ, ಪಿಎಲ್‌ಡಿ ಬ್ಯಾಂಕ್ ಹಾಗೂ ಎಪಿಎಂಇ ನಿರ್ದೇಶಕನಾಗಿ ಬ್ಯಾಡಗಿ ರೈತ ಹೋರಾಟ ಸಮಿತಿ ಅಧ್ಯಕ್ಷನಾಗಿ ಸೇವೆ ಸಲ್ಲಿಸಿದ್ದೇನೆ.

ಮೂಲತಃ ಗದಗ ಜಿಲ್ಲೆಯವನಾದ ನಾನು ಗದುಗಿನಲ್ಲಿಯೇ ವಿದ್ಯಾಭ್ಯಾಸ ಮುಗಿಸಿ ರೋಟ-ರ್ಯಾಕ್ಟ್ ಕ್ಲಬ್‌ನ ಅಧ್ಯಕ್ಷನಾಗಿ, ಜೆ ಟಿ ಮಹಾವಿದ್ಯಾಲಯದಿಂದ ಅಥ್ಲೆಟಿಕ್ ಬ್ಲ್ಯೂ ಆಗಿ, ಗದುಗಿನ ಹಲವಾರು ಸಂಘ-ಸಂಸ್ಥೆಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದು, ಹಾವೇರಿ-ಗದಗ ಕ್ಷೇತ್ರದಿಂದ ಸ್ಪರ್ಧಿಸಲು ಬಿಜೆಪಿ ನಾಯಕರಾದ ಬಿ ಎಸ್ ಯಡಿಯೂರಪ್ಪ, ನಳಿನಕುಮಾರ ಕಟೀಲ ಅವರಿಂದ ಭರವಸೆ ದೊರೆತಿದೆ.

ಹೀಗಾಗಿ, ಕ್ಷೇತ್ರ ವ್ಯಾಪ್ತಿಯಲ್ಲಿ ಸಂಚರಿಸಲು ನಿರ್ಧರಿಸಿದ್ದೇನೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಸನಗೌಡ ಬಿರಾದಾರ, ಅಶೋಕ ಜವಳಿ, ಎಂ ಪಿ ಮುಳಗುಂದ, ಮಹಾಂತೇಶ ಗುರಮ್ಮನವರ ಉಪಸ್ಥಿತರಿದ್ದರು.

## ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ಸದುಪಯೋಗ ಪಡೆಯಲು ಕರೆ

▶▶ಮೊದಲನೇ ಪುಟದಿಂದ

ರಾಮಗೇರಿ, ಸೂರಣಗಿ, ಹುಲ್ಲೂರ, ಲಕ್ಷ್ಮೇಶ್ವರ (ಯು.ಎಲ್.ಬಿ)ಗಳಿಗೆ ಮಾವು, ಅಡ್ರಕಟ್ಟಿ ಗ್ರಾಮಕ್ಕೆ ಮಾವು ಮತ್ತು ದಾಳಿಂಬೆ, ದೊಡ್ಡೂರ, ಶಿಗ್ಲಿ, ಗೋವನಾಳ ಗ್ರಾಮಗಳಿಗೆ ಮಾವು ಮತ್ತು ಪಪ್ಪಾಯ ಬೆಳೆಗಳು ಅಧಿಸೂಚಿತ ಬೆಳೆಗಳಾಗಿವೆ.

ವಿಮಾ ಮೊತ್ತವು ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ಒಂದೇ ಆಗಿರುತ್ತದೆ.

ರೈತರು ವಿಮಾ ಕಂತು ಪಾವತಿಗೆ ಪಾಲ್ಗೊಳ್ಳಲು ಜುಲೈ 31 ಕೊನೆಯ ದಿನವಾಗಿದೆ. ಜಿಲ್ಲೆಗೆ ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ ಆಫ್ ಇಂಡಿಯಾ ಇವರು ಜಿಲ್ಲೆಯ ವಿಮಾ ಸಂಸ್ಥೆಯಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ, ಕಂದಾಯ ಇಲಾಖೆ, ರೈತ ಸಂಪರ್ಕ ಕೇಂದ್ರ ಹಾಗೂ ಹತ್ತಿರದ ಬ್ಯಾಂಕ್ ಶಾಖೆಗಳನ್ನು ಸಂಪರ್ಕಿಸಲು ಶಿರಹಟ್ಟಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ಕುಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 1974ರ ಬಳಿಕ ಮತ್ತೆ ಮುಳುಗುವ ಭೀತಿಯಲ್ಲಿ ಬಂಟ್ವಾಳ?

■ವಿಜಯಸಾಕ್ಷಿ ಸುದ್ದಿ, ಬಂಟ್ವಾಳ

1923, ಆಗಸ್ಟ್ 7 ಮತ್ತು 8.. ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನಲ್ಲಿ ಮಹಾ ಪ್ರವಾಹವೊಂದು ಬಂದಿತ್ತು.

ನೋಡಿದವರು ಯಾರಿದ್ದಾರೆ ಎಂಬ ಪ್ರಶ್ನೆ ನಿಮ್ಮಲ್ಲಿ ಮೂಡಬಹುದು. ಆದರೆ, ಹಿರಿಯರಿಂದ ಕಿರಿಯರಿಗೆ ಮಾಹಿತಿ ವರ್ಗಾವಣೆ ಆಗುವುದೇನು ದೊಡ್ಡ ವಿಚಾರವಲ್ಲ. 1923ರ ಪ್ರವಾಹದಲ್ಲಿ ಬದುಕಿದ ಮಕ್ಕಳು ಈಗ ವೃದ್ಧಾಪ್ಯದಲ್ಲಿದ್ದಾರೆ.

# ಕ್ರೀಡೆಯಿಂದ ಉತ್ತಮ ಆರೋಗ್ಯ: ಜಂಭುನಾತ ಹರಿವಾಣ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆಯಲ್ಲಿ ಭಾಗವಹಿಸಬೇಕು. ವಿದ್ಯಾರ್ಥಿ ಜೀವನದಲ್ಲಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಾದ ಕ್ರೀಡೆ, ಯೋಗಾಸನ ಇತ್ಯಾದಿಗಳಲ್ಲಿ ಭಾಗವಹಿಸುವುದರಿಂದ ಉತ್ತಮ ಆರೋಗ್ಯ ಹೊಂದಿ, ದೈಹಿಕ-ಮಾನಸಿಕವಾಗಿ ಸದೃಢರಾಗಬಹುದು ಎಂದು ಮನೋಹರ ಅಮರಪ್ಪ ಇನಾಮತಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜಂಭುನಾತ ಹರಿವಾಣ ಹೇಳಿದರು.

ಗದಗ ಸೈಂಟ್ ಜಾನ್ ಶಾಲೆಯ ರಜತಮಹೋತ್ಸವ ನಿಮಿತ್ತ ಜರುಗಿದ ಕಬ್ಬಡ್ಡಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ಸಾಧನೆಗೈದ ಕುರ್ತಕೋಟಿ ಗ್ರಾಮದ ಪ್ರೌಢಶಾಲಾ ವಿದ್ಯಾರ್ಥಿಗಳ ತಂಡವನ್ನು ಸನ್ಮಾನಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಆರ್ ಎಂ ಮೂಲಿಮನಿ, ಆರ್ ಎಸ್ ಪಾಟೀಲ್, ಯು ವಿ ಬೇಟಗೇರಿ, ಅಪ್ಪಣ್ಣಾ ಇನಾಮತಿ, ದೈಹಿಕ ಶಿಕ್ಷಕ ಎಂ ಎಚ್ ಅಂಗಡಿ, ಶಾಲಾ ಶಿಕ್ಷಕರ ವೃಂದ, ವಿದ್ಯಾರ್ಥಿಗಳು ಇದ್ದರು.

# ನಾಗಾವಿ ಗ್ರಾಮ ಪಂಚಾಯಿತಿಗೆ ಅಧ್ಯಕ್ಷ-ಉಪಾಧ್ಯಕ್ಷರ ಅವಿರೋಧ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಇಲ್ಲಿನ ನಾಗಾವಿ ಗ್ರಾಮ ಪಂಚಾಯಿತಿಯ 2ನೇ ಅವಧಿಗೆ ನಡೆದ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕುಬೇರಪ್ಪ ರಾಠೋಡ, ಉಪಾಧ್ಯಕ್ಷರಾಗಿ ಸುಮಾ.ಎಸ್ ತಳವಾರ ಆಯ್ಕೆಯಾದರು.

ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಪುರುಷ, ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಿದ್ದು, ಅಧ್ಯಕ್ಷ ಸ್ಥಾನಕ್ಕೆ ಕುಬೇರಪ್ಪ ರಾಠೋಡ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸುಮಾ ಎಸ್.ತಳವಾರ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಎರಡೂ ಸ್ಥಾನಗಳು ಅವಿರೋಧವಾಗಿ ಆಯ್ಕೆಯಾದವು. ಚುನಾವಣಾಧಿಕಾರಿಯಾಗಿ ರಫೀಕ್ ಕಾರ್ಯನಿರ್ವಹಿಸಿದರು.


ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ತಾ ಪಂ ಮಾಜಿ ಅಧ್ಯಕ್ಷ ಬಿ ಆರ್ ದೇವರೆಡ್ಡಿ, ಸಿ ಬಿ ದೊಡ್ಡಗೌಡರ, ಪಿಡಿಓ ಮಂಜುಳಾ ಹೊಸಮನಿ, ಗ್ರಾ ಪಂ ಸದಸ್ಯರಾದ ಹನಮವ್ವ ಶಿದ್ನೇಕೊಪ್ಪ, ಸುರೇಶ ಪವಾರ, ಗವಿಯಪ್ಪಾ ಪೂಜಾರ, ಪಾರವ್ವ ಗೋರವರ, ಸರಸ್ವತಿ ಮರಬರೆಡ್ಡಿ, ಹಜರೇಸಾಬ ನಧಾಫ್, ಹನಮವ್ವ ಗುಡಿಮನಿ, ಅಲ್ಲಾಸಾಬ ಫೀರಖಾನವರ, ಉಳಿಯಪ್ಪಾ ಶಿಗ್ಗಿ, ಕವಿತಾ ಪವಾರ, ಮೀರಾಬಾಯಿ ಲಮಾಣಿ, ಗೌರಿ ತೋಟದ, ಯಮನವ್ವ ಬಾಗಲಕೋಟಿ ಮೊದಲಾದವರು ಇದ್ದರು.

# ಸಂಕಷ್ಟದಲ್ಲಿ ಹತ್ತಿ ಬೆಳೆಗಾರರು: ಪರಿಹಾರಕ್ಕೆ ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸದಾ ಒಂದಿಲ್ಲೊಂದು ಸಂಕಷ್ಟದ ಸುಳಿಯಲ್ಲಿ ಸಿಲುಕುವ ರೈತಾಪಿ ವರ್ಗಕ್ಕೆ ಪ್ರಸಕ್ತ ವರ್ಷದಲ್ಲಿ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಸಮರ್ಪಕ ಬಿತ್ತನೆಯಾಗಿಲ್ಲ. ನೀರಾವರಿ ಜಮೀನುಗಳಲ್ಲಿ ಬೆಳೆದ ಹತ್ತಿ ಬೆಳೆಯೂ ಸಹ ಸತತ ಸುರಿಯುತ್ತಿರುವ ಮಳೆಗೆ ಕೊಳೆಯತೊಡಗಿದ್ದು, ರೈತರು ಕಂಗಾಲಾಗಿದ್ದಾರೆ.

ಶಿರಹಟ್ಟಿ ತಾಲೂಕಿನ ಮಾಚೇನಹಳ್ಳಿ, ಮಜ್ಜೂರು, ನವೇಭಾವನೂರ, ಬನ್ನಿಕೊಪ್ಪ, ಹಡಗಲಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ನೀರಾವರಿ ಜಮೀನಿನಲ್ಲಿ ಹತ್ತಿ ಬೆಳೆ ಬೆಳೆಯಲಾಗಿತ್ತು. ಕಳೆದ 8-10 ದಿನಗಳಿಂದ ಸತತವಾಗಿ ಸುರಿಯುತ್ತಿರುವ ಮಳೆಗೆ ಗಿಡಗಳು ಕೊಳೆತು, ಅಲ್ಲಿಯೇ ಮತ್ತೆ ಹುಟ್ಟುತ್ತಿದ್ದು, ಹತ್ತಿ ಬೆಳೆಯೂ ಕೈ ಹಿಡಿಯದಿರುವ ಲಕ್ಷಣಗಳು ಗೋಚರಿಸುತ್ತಿದೆ.



ಭಾಗದಲ್ಲಿ ಮುಂಗಾರು ಕೈಕೊಟ್ಟಿದ್ದರಿಂದ ಯಾವುದೇ ಬೆಳೆಗಳ ಬಿತ್ತನೆ ಮಾಡಿರಲಿಲ್ಲ. ನೀರಾವರಿ ಜಮೀನುಗಳಲ್ಲಿ ಹತ್ತಿ ಬಿತ್ತನೆ ಮಾಡಲಾಗಿತ್ತು. ಕಟಾವಿನ ಸಮಯದಲ್ಲಿ ಮಳೆ ಸುರಿಯುತ್ತಿರುವುದರಿಂದ ಬೆಳೆ ಸಂಪೂರ್ಣ ಹಾನಿಗೀಡಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಹತ್ತಿ ಬೆಳೆಗಾರ ಶಂಕರ ಮರಾಠೆ, ನಮ್ಮ ಭಾಗದಲ್ಲಿ ... ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ, ಸಮೀಕ್ಷೆ ನಡೆಸಿ, ಯೋಗ್ಯ ಪರಿಹಾರ ಒದಗಿಸಬೇಕು ಎಂದರು.



ಗ್ರಾಮ ಪಂಚಾಯಿತಿ 2ನೇ ಅವಧಿಯ ಚುನಾವಣೆಯಲ್ಲಿ ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾ ಪಂಗೆ ಅಧ್ಯಕ್ಷರಾಗಿ ಮೈಲಾರೆಪ್ಪ ಹಾದಿಮನಿ, ಉಪಾಧ್ಯಕ್ಷೆಯಾಗಿ ಲಲಿತಾ ಪಾಟೀಲ, ಬೆಳ್ಳಟ್ಟಿ ಗ್ರಾ ಪಂಗೆ ಅಧ್ಯಕ್ಷರಾಗಿ ರಮೇಶ ನಿರ್ವಾಣಶೆಟ್ಟರ, ಉಪಾಧ್ಯಕ್ಷೆಯಾಗಿ ಗಂಗವ್ವ ತಳವಾರ, ಛಬ್ಬಿ ಗ್ರಾ ಪಂಗೆ ಅಧ್ಯಕ್ಷೆಯಾಗಿ ಸುವರ್ಣ ಆರಿ, ಉಪಾಧ್ಯಕ್ಷರಾಗಿ ವೀರಣ್ಣ ಮೆಣಸಿನಕಾಯಿ, ಕೋಗನೂರ ಗ್ರಾ ಪಂಗೆ ಅಧ್ಯಕ್ಷೆಯಾಗಿ ತಿರಕವ್ವ ಹರಿಜನ, ಉಪಾಧ್ಯಕ್ಷೆಯಾಗಿ ಕಸ್ತೂರೆವ್ವ ತಳ್ಳಳ್ಳಿ, ಮಾಚೇನಹಳ್ಳಿ ಗ್ರಾ ಪಂಗೆ ಅಧ್ಯಕ್ಷರಾಗಿ ಶರೀಫಸಾಬ ನದಾಫ್, ಉಪಾಧ್ಯಕ್ಷೆಯಾಗಿ ರೇಣವ್ವ ಬಂಡಿವಡ್ಡರ, ಮಜ್ಜೂರ ಗ್ರಾ ಪಂಗೆ ಅಧ್ಯಕ್ಷರಾಗಿ ಗನಿಸಾಬ ಬರದೂರ, ಉಪಾಧ್ಯಕ್ಷೆಯಾಗಿ ರೇಣುಕಾ ಲಮಾಣಿ ಆಯ್ಕೆಯಾಗಿದ್ದಾರೆ.

### ವಾರಸುದಾರರಿಗೆ ಹಸ್ತಾಂತರಿಸಿದ ಗದಗ ಅಂಚೆ ವಿಭಾಗದ ಅಧೀಕ್ಷಕ ಚಿದಾನಂದ ಪದ್ಮಶಾಲಿ

# ಅಪಘಾತ ವಿಮೆಯ ಚೆಕ್ ವಿತರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಅಪಘಾತ ವಿಮಾ ಚೆಕ್ ವಿತರಣಾ ಸಮಾರಂಭ ಜರುಗಿತು. ಭಾರತೀಯ ಅಂಚೆ ಇಲಾಖೆ ಹಾಗೂ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ವತಿಯಿಂದ ಟಾಟಾ ಎಐಜಿ ( ಅಪಘಾತ ವಿಮೆ) ವಿಮೆಯ ಮೊತ್ತ ಹತ್ತು ಲಕ್ಷ ರೂಪಾಯಿಗಳ ಚೆಕ್ಕನ್ನು ಶಿರಹಟ್ಟಿ ತಾಲೂಕಿನ ತಾರಿಕೊಪ್ಪ ಅಂಚೆ ಸೇವಾನಗರದ ಲಕ್ಷ್ಮೀ ಲಮಾಣಿಗೆ ಹಸ್ತಾಂತರಿಸಲಾಯಿತು.




ರವಿ ಲಮಾಣಿ ಅವರು ತಾರಿಕೊಪ್ಪ ಅಂಚೆ ಕಚೇರಿಯಲ್ಲಿ ಕೇವಲ 399 ರೂಪಾಯಿಯನ್ನು ನೀಡಿ ಒಂದು ಟಾಟಾ ಎಐಜಿ ವಿಮಾ ಪಾಲಿಸಿಯನ್ನು ತೆಗೆದುಕೊಂಡಿದ್ದರು.

ನಾಲ್ಕು ತಿಂಗಳ ನಂತರ ದುರದೃಷ್ಟವಶಾತ್ ಅಪಘಾತದಲ್ಲಿ ಮರಣ ಹೊಂದಿದ್ದರು. ಅವರಿಗೆ ಭಾರತೀಯ ಅಂಚೆ ಇಲಾಖೆ ಹಾಗೂ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್, ಟಾಟಾ ಕಂಪನಿಯ ಸಹಯೋಗದೊಂದಿಗೆ 10 ಲಕ್ಷ ರೂಪಾಯಿಗಳ ವಿಮೆಯ ಮೊತ್ತವನ್ನು ರವಿ ಲಮಾಣಿ ಅವರ ಪತ್ನಿಯಾದ ಲಕ್ಷ್ಮೀ ಲಮಾಣಿಗೆ ನೀಡಲಾಯಿತು.

ಗದಗ ಅಂಚೆ ವಿಭಾಗದ ಅಧೀಕ್ಷಕರಾದ ಚಿದಾನಂದ ಪದ್ಮಶಾಲಿ ಅವರು ವಿಮೆಯ ಮೊತ್ತದ ಚೆಕ್ಕನ್ನು ಹಸ್ತಾಂತರಿಸಿ ಮಾತನಾಡಿ ಅತೀ ಕಡಿಮೆ ಮೊತ್ತದ ವಿಮಾ ಕಂತನ್ನು ತೆಗೆದುಕೊಂಡು 10 ಲಕ್ಷ ಮೊತ್ತದ ವಿಮಾ ಹಣವನ್ನು ವಾರಸುದಾರರಿಗೆ ನೀಡುತ್ತಿರುವುದು ಅಂಚೆ ಇಲಾಖೆಯ ಸಾರ್ಥಕ ಸೇವೆಯಾಗಿದೆ. ಮೃತರ ಕುಟುಂಬದ ಮುಂದಿನ ನಿರ್ವಹಣೆಗೆ ಸಹಾಯವಾಗಲಿದೆ ಎಂದು ಹೇಳಿದರು.

ಈ ಪಾಲಿಸಿಯಿಂದ ಕೇವಲ ಮರಣ ಹೊಂದಿದವರಿಗೆ ಮಾತ್ರವಲ್ಲದೇ ಅಪಘಾತದಿಂದ ಗಾಯಗೊಂಡವರಿಗೂ ಆಸ್ಪತ್ರೆಯ ಖರ್ಚನ್ನು ವಿಮಾ ಪಾಲಿಸಿಯು ನೀಡುತ್ತದೆ ಎಂದರು.

ಈ ಪಾಲಿಸಿಯ ಸೌಲಭ್ಯ ಗದಗ ವಿಭಾಗದ ಎಲ್ಲಾ ಅಂಚೆ ಕಛೇರಿಗಳಲ್ಲಿಯೂ ಇದ್ದು ಎಲ್ಲರೂ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಉತ್ತರ ಕರ್ನಾಟಕ ವಲಯದ ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್‌ನ ಮುಖ್ಯ ಪ್ರಭಂದಕರಾದ ರಾಣು ಅಗರವಾಲ್ ಮಾತನಾಡಿ, ಟಾಟಾ ಅಪಘಾತ ವಿಮೆ ಅತಿ ಕಡಿಮೆ ಕಂತನ್ನು ಹೊಂದಿದ್ದು ಅತೀ ಹೆಚ್ಚಿನ ಮೊತ್ತದ ವಿಮೆಯನ್ನು ನೀಡುತ್ತಿದೆ. ಈ ರೀತಿಯ ಉತ್ತಮ ವಿಮಾ ಸೌಲಭ್ಯ ಬೇರೆ ಯಾವ ವಿಮಾ ಸಂಸ್ಥೆಗಳಲ್ಲಿ ಕೂಡಾ ಇರುವುದಿಲ್ಲ ಎಂದರು. ಅಂಚೆ ಇಲಾಖೆಯಿಂದ ಈ ವಿಮಾ ಪಾಲಿಸಿಗಳ ಸೌಲಭ್ಯ ಸಿಗುವುದು ಎಲ್ಲಾ ಗ್ರಾಮೀಣ ಜನರಿಗೆ ಬಹಳಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು.

ಗದಗ ಐಪಿಬಿಬಿಯ ಮ್ಯಾನೇಜರ್ ಆನಂದಸಾಗರ ಮಾತನಾಡಿ, ಗದಗ ಶಾಖೆಯಲ್ಲಿ ಮೊದಲ ಅಪಘಾತ ವಿಮೆಯನ್ನು ನೀಡುತ್ತಿದ್ದು ಇದರಿಂದ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಜನರು ಈ ಸೌಲಭ್ಯ ಪಡೆದುಕೊಳ್ಳಬೇಕೆಂದು ತಿಳಿಸಿದರು. ವಿಮಾ ಪಾಲಿಸಿಯನ್ನು ಮಾಡಿಸಿ ಬಡ ಕುಟುಂಬಕ್ಕೆ ಸಹಾಯವನ್ನು ಮಾಡಲು ಕಾರಣರಾದ ತಾರೀಕೊಪ್ಪ ಶಾಖಾ ಅಂಚೆ ಪಾಲಕ ಬಸವರಾಜ ಮಡಿವಾಳರ್ ಅವರನ್ನು ಇಲಾಖೆಯ ಉನ್ನತ ಅಧಿಕಾರಿಗಳು ಪ್ರಶಂಸಿದರು.

ಸಹಾಯಕ ಅಧೀಕ್ಷಕ ಮಂಜುನಾಥ, ಟಾಟಾ ಸಂಸ್ಥೆಯ ವಿಶ್ವಾಸ್, ಉಮೇಶ್, ವಿಭಾಗೀಯ ಕಛೇರಿಯ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬಸವರಾಜ ಶೇಡದ್ ಕಾರ್ಯಕ್ರಮ ನಿರೂಪಿಸಿದರು.

### ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ಪಾಲಕರ ಸಭೆ

# ಮಕ್ಕಳ ಕ್ಷೇಮಾಭಿವೃದ್ಧಿಯೊಂದಿಗೆ ಶಿಕ್ಷಣಕ್ಕೆ ಒತ್ತು



**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷ ಅಗತ್ಯವುಳ್ಳ ಮಕ್ಕಳ ಕ್ಷೇಮಾಭಿವೃದ್ಧಿಯೊಂದಿಗೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುವಲ್ಲಿ ಅರುಣೋದಯ ಶಾಲೆ ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದೆ ಎಂದು ಶಾಲಾ ಆಡಳಿತ ಮಂಡಳಿಯ ಅಧ್ಯಕ್ಷ ತುಕಾರಾಮಸಿಂಗ್ ಜಮಾದಾರ ಹೇಳಿದರು. ಅವರು ಮಂಗಳವಾರ ನಗರದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ನಡೆದ ಪಾಲಕರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಅಗತ್ಯವಿರುವ ಆರೋಗ್ಯ ಕಾಳಜಿ, ಅವರಿಗೆ ಮನವರಿಕೆಯಾಗುವ ರೀತಿಯಲ್ಲಿ ಬೋಧನೆ, ದೈಹಿಕ ಚಟುವಟಿಕೆಗಳತ್ತ ಗಮನ ನೀಡಲಾಗುತ್ತಿದೆ. ಅನುಭವಿ ಶಿಕ್ಷಕ ವೃಂದದಿಂದ ಹಾಗೂ ತಜ್ಞ ವೈದ್ಯರಿಂದ ಆರೋಗ್ಯ ತಪಾಸಣೆ, ಫಿಜಿಯೋಥೆರಪಿ ಮುಂತಾದವುಗಳ ಬಗ್ಗೆ ಕಾಳಜಿ ವಹಿಸಲಾಗುತ್ತಿದ್ದು, ಇದಕ್ಕೆ ಮಕ್ಕಳ ಪಾಲಕ-ಪೋಷಕರ ಸಹಕಾರ, ಸ್ಪಂದನೆಯೂ ಅಗತ್ಯ ಎಂದರು.

ಫಿಜಿಯೋಥೆರಪಿ ತಜ್ಞರಾದ ಡಾ. ದಾನೇಶ್ವರಿ ಕೊಕ್ಕಳಕಿ ಮಾತನಾಡಿ, ಅಗತ್ಯತೆಯುಳ್ಳ ಮಕ್ಕಳಿಗೆ ಸಕಾಲಕ್ಕೆ ಫಿಜಿಯೋಥೆರಪಿ ಮಾಡಬೇಕು. ಈ ಬಗ್ಗೆ ಪಾಲಕ-ಪೋಷಕರು ಹೆಚ್ಚಿನ ಮಹತ್ವ ನೀಡಬೇಕೆಂದರು.

ಆಪ್ತ ಸಮಾಲೋಚಕಿ ಡಾ.ನಿಶ್ಚಿತಾ ಬಿ ಎಲ್ ಮಾತನಾಡಿ, ವಿಶೇಷ ಅಗತ್ಯವುಳ್ಳ ಮಕ್ಕಳಲ್ಲಿ ಕೆಲವು ಮಕ್ಕಳಿಗೆ ಶಿಕ್ಷಕರು, ಪಾಲಕರನ್ನು ಒಳಗೊಂಡು ಆಪ್ತ ಸಮಾಲೋಚನೆಯ ಅಗತ್ಯವಿರುತ್ತದೆ.

ಇದು ಮಕ್ಕಳ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು. ಶಾಲಾ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ ಮಾತನಾಡಿ, ಫಿಜಿಯೋಥೆರಫಿಸ್ಟ್ ಹಾಗೂ ಆಪ್ತ ಸಮಾಲೋಚಕರು ಪ್ರತಿ ತಿಂಗಳ 2 ಮತ್ತು 4ನೇ ಮಂಗಳವಾರ ಶಾಲೆಗೆ ಭೇಟಿ ನೀಡುವರು. ಅಗತ್ಯವುಳ್ಳವರು ಅವರ ಸೇವೆಯನ್ನು ಪಡೆಯಬಹುದು ಎಂದರು. ಸಭೆಯಲ್ಲಿ ಪಾಲಕ-ಪೋಷಕರು ಸಲಹೆ ಸೂಚನೆ ನೀಡಿದರು. ವೇದಿಕೆಯ ಮೇಲೆ ಶಾಲಾ ಆಡಳಿತ ಮಂಡಳಿಯ ಕಾರ್ಯದರ್ಶಿ ಜಯರಾಜ ಮುಳಗುಂದ ಉಪಸ್ಥಿತರಿದ್ದರು. ಮಲ್ಲಿಕಾರ್ಜುನ ನಾಗಲಾಪೂರ ಸೇರಿದಂತೆ ಶಾಲೆಯ ಶಿಕ್ಷಕ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿದ್ದರು.

# ಹೊಂಬಳ ಗ್ರಾ ಪಂ ಕಾಂಗ್ರೆಸ್ ಮಡಿಲಿಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹೊಂಬಳ ಗ್ರಾಮ ಪಂಚಾಯಿತಿಯಲ್ಲಿ 2ನೇ ಅವಧಿಗಾಗಿ ನಡೆದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಸದಸ್ಯರು ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷರಾಗಿ ಭೀಮಾಂಬಿಕಾ ಜಗದೀಶ ಹಾಲನವರ, ಉಪಾಧ್ಯಕ್ಷರಾಗಿ ನೀಲಮ್ಮ ಮಾರುತೆಪ್ಪ ಬಾಳಮ್ಮನವರ ಆಯ್ಕೆಯಾದರು.

ಹೊಂಬಳ ಗಾ ್ರಪಂಗೆ ಕಾಂಗ್ರೆಸ್ ಬೆಂಬಲಿತ ಸದಸ್ಯರನ್ನು ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡುವಲ್ಲಿ ಶ್ರಮಿಸಿದ ಗ್ರಾ ಪಂ ಸದಸ್ಯರಿಗೆ ಕಾಂಗ್ರೆಸ್ ಮುಖಂಡರು, ಮಾಜಿ ಶಾಸಕ ಡಿ ಆರ್ ಪಾಟೀಲ ಹಾಗೂ ಬಿ ಆರ್ ಯಾವಗಲ್ ಅಭಿನಂದನೆ ಸಲ್ಲಿಸಿದ್ದಾರೆ.




# ಮಳೆ ತಗ್ಗಿದರೂ ಮುಂದುವರಿದ ಪ್ರವಾಹ: ಹೆದ್ದಾರಿಗಳಲ್ಲಿ ಗುಡ್ಡ ಕುಸಿತ, ಸಂಚಾರಕ್ಕೆ ತೊಂದರೆ..!

**■ವಿಜಯಸಾಕ್ಷಿ ಸುದ್ದಿ, ಕಾರವಾರ**

ಉತ್ತರ ಕನ್ನಡದಲ್ಲಿ ಅಬ್ಬರಿಸುತ್ತಿದ್ದ ಮಳೆ ಕೊಂಚ ಕಡಿಮೆಯಾಗಿದ್ದು, ನದಿ ತೀರದ ಪ್ರದೇಶದಲ್ಲಿ ಸೃಷ್ಟಿಯಾಗಿದ್ದ ಪ್ರವಾಹ ಕೊಂಚ ಇಳಿಕೆಯಾಗಿದೆ. ಆದರೆ, ಪ್ರವಾಹ ಹಾಗೂ ಗಾಳಿ ಮಳೆಯಿಂದಾಗಿ ಜಿಲ್ಲೆಯಲ್ಲಿ ಸಾಕಷ್ಟು ಹಾನಿ ಸಂಭವಿಸಿದೆ. ಗುಡ್ಡ ಕುಸಿತದಿಂದಾಗಿ ಹಲವು ಹೆದ್ದಾರಿಗಳು ಬಂದ್ ಆಗಿವೆ. ಜನ ಸಂಚಾರಕ್ಕೆ ಪರದಾಡಬೇಕಾದ ಸ್ಥಿತಿ ಮುಂದುವರಿದಿದೆ.

ಉತ್ತರ ಕನ್ನಡದಲ್ಲಿ ಕಳೆದ ನಾಲ್ಕೈದು ದಿನಗಳಿಂದ ಆರ್ಭಟಿಸುತ್ತಿದ್ದ ಮಳೆ ಅಬ್ಬರ ಸ್ವಲ್ಪ ಕಡಿಮೆಯಾಗಿದೆ. ಪರಿಣಾಮ ಗಂಗಾವಳಿ, ಅಘನಾಶಿನಿ, ವರದಾ ಹಾಗೂ ಗುಂಡಬಾಳ ಮತ್ತು ಭಾಸ್ಕೇರಿ ಹೊಳೆ ತೀರದ ಪ್ರದೇಶದಲ್ಲಿ ಸೃಷ್ಟಿಯಾಗಿದ್ದ ಪ್ರವಾಹ ನಿಧಾನವಾಗಿ ಇಳಿಕೆಯಾಗುತ್ತಿದೆ. ಅಂಕೋಲಾ ಬಿಳಿಹೊಯ್ಗಿ ಗ್ರಾಮದಲ್ಲಿ ಮನೆಗಳಿಗೆ ನುಗ್ಗಿದ್ದ ನೀರು ಕಡಿಮೆಯಾಗುತ್ತಿದೆ. ಆದರೆ, ತೀರಾ ತಗ್ಗು ಪ್ರದೇಶಗಳಲ್ಲಿರುವ ಜಮೀನುಗಳಲ್ಲಿ ನೆರೆ ಪರಿಸ್ಥಿತಿ ಹಾಗೆ ಮುಂದುವರಿದಿದೆ.

ಮಳೆಯಿಂದಾಗಿ ನದಿ ಹಾಗೂ ಹಳ್ಳಗಳು ತುಂಬಿ ಹರಿಯುತ್ತಿರುವ ಕಾರಣ ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ರಜೆ ಮುಂದುವರಿಸಲಾಗಿದೆ. ಜಲಾಶಯಗಳಲ್ಲಿ ಜಿಲ್ಲಾಡಳಿತ ಸೂಚಿಸಿದ ನೀರಿನ ಮಟ್ಟ ಕಾಯ್ದುಕೊಂಡು ಪ್ರವಾಹವಾಗದಂತೆ ಅಲ್ಪ ಪ್ರಮಾಣದಲ್ಲಿ ನೀರು ಹೊರಹಾಕಲಾಗುತ್ತಿದೆ. ಇನ್ನು ನದಿಗಳು ಉಕ್ಕಿ ಹರಿದ ಕಾರಣ ಹೊನ್ನಾವರ, ಕುಮಟಾದಲ್ಲಿ 11 ಕಾಳಜಿ ಕೇಂದ್ರ ತೆರೆಯಲಾಗಿದೆ. ಸುಮಾರು 360 ಜನರು ಆಶ್ರಯ ಪಡೆದಿದ್ದಾರೆ.

### ಶಾಲಾ-ಕಾಲೇಜು ರಜೆ ಘೋಷಣೆಗೆ ಪಾಲಕರ ಆಗ್ರಹ

# ನಿಲ್ಲದ ಮಳೆರಾಯ: ಜನಜೀವನ ಅಸ್ತವ್ಯಸ್ತ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ 10 ದಿನಗಳಿಂದ ಸೋನೆಯಂತೆ ಸುರಿಯುತ್ತಿರುವ ಮಳೆ ಮಂಗಳವಾರವೂ ತನ್ನ ನರ್ತನ ಮುಂದುವರೆಸಿದ್ದು, ಜನ ಸುಸ್ತಾಗಿ ಹೋಗಿದ್ದಾರೆ.

ಮಳೆ ಪ್ರಾರಂಭವಾದಾಗಿನಿಂದ ಕೃಷಿಕರು ಸೇರಿ ಎಲ್ಲ ವರ್ಗದ ಕೂಲಿಕಾರರು, ಎಲ್ಲ ವರ್ಗದ ವ್ಯಾಪಾರಸ್ಥರು ಉದ್ಯೋಗವಿಲ್ಲದೇ ಮುಂದ್ಹೇಗೆ ? ಎಂಬ ಚಿಂತೆಯಲ್ಲಿ ಕೈಕಟ್ಟಿ ಕುಳಿತುಕೊಳ್ಳುವಂತಾಗಿದೆ.

ನೆರೆಯ ಧಾರವಾಡ, ಹಾವೇರಿ ಜಿಲ್ಲೆಯ ಶಾಲೆಗಳಿಗೆ ರಜೆ ಘೋಷಿಸಿರುವ ಹಿನ್ನಲೆ ನಮ್ಮ ಜಿಲ್ಲೆಯಲ್ಲಿಯೂ ರಜೆ ಘೋಷಿಸಬಹುದು ಎಂಬ ಭರವಸೆ ಹುಸಿಯಾಗುತ್ತಿದ್ದಂತೆಯೇ ಶಾಲಾ ಮಕ್ಕಳು, ಶಿಕ್ಷಕರು ಮಳೆಯಲ್ಲಿಯೇ ಛತ್ರಿ, ರೇನ್‌ಕೋಟ್, ಜರ್ಕಿನ್ ಹಾಕಿಕೊಂಡು ಶಾಲೆಯತ್ತ ಸಾಗುವಂತಾಗಿದೆ. ಸಂಜೆ ಮಳೆಯಲ್ಲಿಯೇ ನೆನೆದು ಕೆಸರು ತುಂಬಿದ ರಸ್ತೆಯ ಮೂಲಕ ಮನೆ ಸೇರಿದರು.



ಕೃಷಿ ಚಟುವಟಿಕೆಗಳಿಗೆ ಅವಕಾಶವಿಲ್ಲದ್ದರಿಂದ ಬೆಳೆಗಿಂತ ಕಳೆಯೇ ಹೆಚ್ಚಾಗಿದೆ ಮತ್ತು ಬೆಳೆಗೆ ಕೀಟಬಾಧೆ, ರೋಗಬಾಧೆ ಆವರಿಸಿದ್ದು ರೈತ ಸಮುದಾಯ ಚಿಂತೆ-ಗೀಡಾಗಿದ್ದಾರೆ. ತಾಲೂಕಿನಾದ್ಯಂತ ಮನೆಗಳು, ಶಾಲಾ-ಕಾಲೇಜು, ಸರ್ಕಾರಿ ಕಚೇರಿ ಕಟ್ಟಡಗಳು, ವ್ಯಾಪಾರಿ ಮಳಿಗೆಗಳು ಸೋರುತ್ತಿದ್ದು ಇಡೀ ಜನಜೀವನ ಅಸ್ತವ್ಯಸ್ತಗೊಂಡಿದೆ.

ಮನೆಗಳಿಗೆ ಪ್ಲಾಸ್ಟಿಕ್ ಹೊದಿಕೆ ಹಾಕಿದ್ದರೂ ನೀರು ಜಿನುಗುತ್ತಿರುವ ಮನೆಯಲ್ಲಿಯೇ ಮಕ್ಕಳು, ವೃದ್ಧರು, ದನಕರುಗಳೊಂದಿಗೆ ಪಡಬಾರದ ಯಾತನೆ ಅನುಭವಿಸುತ್ತಿದ್ದಾರೆ. ಶಾಲಾ ಮಕ್ಕಳು ಶಾಲೆಗೆ ಹೋಗಲು ಪರದಾಡುತ್ತಿದ್ದಾರೆ. ರಸ್ತೆಗಳು ಸಂಪೂರ್ಣ ಹಾಳಾಗಿದ್ದರಿಂದ ಸಾರಿಗೆ ವ್ಯವಸ್ಥೆ ಹದಗೆಟ್ಟಿದೆ. ವ್ಯಾಪಾರ-ವಹಿವಾಟಿನ ಮೇಲೆ ಪರಿಣಾಮ ಬೀರಿದೆ. ರೈತರು ಬೆಳೆದ ತರಕಾರಿ, ಹೂವು, ಹಣ್ಣುಗಳನ್ನು ಮಾರುಕಟ್ಟೆಗೆ ತರಲಾಗುತ್ತಿಲ್ಲದ ಕಾರಣ ಅವುಗಳ ಬೆಲೆ ಹೆಚ್ಚಳವಾಗಿದೆ.

**ಶಾಲಾ-ಕಾಲೇಜು ರಜೆ ಘೋಷಣೆಗೆ ಆಗ್ರಹ:**

ಕಳೆದ 8/10 ದಿನಗಳಿಂದ ಬಿಟ್ಟೂ ಬಿಡದೇ ಸುರಿಯುತ್ತಿರುವ ಮಳೆಯಿಂದ




ಮನೆಗಳು ಸೋರುತ್ತಿವೆ. ರಸ್ತೆಗಳ ಸ್ಥಿತಿ ಅಯೋಮಯವಾಗಿದ್ದು ಸಾರಿಗೆ ಸಂಚಾರದ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ.

ಮನೆಯಿಂದ ಹೊರಬರಲಾದ ಪರಿಸ್ಥಿತಿಯಲ್ಲಿ ದಿನವೂ ಮಕ್ಕಳು ಮಳೆಯಲ್ಲಿ ನೆನೆದು ಶಾಲೆಗೆ ಬರುತ್ತಿದ್ದಾರೆ. ಶಾಲೆಗಳೂ ಸೋರುತ್ತಿದ್ದು ಜತೆಗೆ ಶೀತ ಗಾಳಿಯಿಂದ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ.

ಅಲ್ಲದೇ ಮುಖ್ಯವಾಗಿ ಶಾಲಾ-ಕಾಲೇಜು ಮಕ್ಕಳಿಗೆ ಪಿಂಕ್-ಐ/ಗುಲಾಬಿ ಕಣ್ಣಿನ ಬಾಧೆ ಆವರಿಸುತ್ತಿದೆ. ಇದು ಸಾಂಕ್ರಾಮಿಕವಾಗಿದ್ದರಿಂದ ಇಡೀ ಕುಟುಂಬ ಮತ್ತು ಶಾಲೆಯ ಮಕ್ಕಳಿಗೆ ಆವರಿಸುತ್ತಿದೆ.

ಮಕ್ಕಳು ಪಡಬಾರದ ಯಾತನೆ ಅನುಭವಿಸುತ್ತಿದ್ದಾರೆ.

ಅಲ್ಲದೇ ಮಳೆಯೂ ಮುಂದುವರೆಯುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ



ನೀಡಿದೆ.

ನೆರೆಯ ಹಾವೇರಿ, ಧಾರವಾಡ ಜಿಲ್ಲೆಯಲ್ಲಿ ಶಾಲೆ-ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಜಿಲ್ಲಾಧಿಕಾರಿಗಳು ಎಲ್ಲವನ್ನೂ ಕೂಲಂಕುಶವಾಗಿ ಪರಿಗಣಿಸಿ 2 ದಿನ ಶಾಲಾ-ಕಾಲೇಜುಗಳಿಗೆ ರಜೆ ಘೋಷಣೆ ಮಾಡಬೇಕು ಎಂದು ಪಾಲಕರಾದ ಬಸವರಾಜ ಮೆಣಸಿನಕಾಯಿ, ರುದ್ರಪ್ಪ ಆದಿ, ರಮೇಶ ಹೆಬ್ಬಾಳ, ಬಸವರಾಜ ಅಣ್ಣಿಗೇರಿ ಮತ್ತಿತರರು ಆಗ್ರಹಿಸಿದ್ದಾರೆ.



> ಮಳೆ ನಿಲ್ಲುತ್ತಿಲ್ಲವಾದ್ದರಿಂದ ಪಟ್ಟಣ ಸೇರಿ ತಾಲೂಕಿನಾದ್ಯಂತ ಬೀಳುವ ಮನೆಗಳ ಸಂಖ್ಯೆ ಹೆಚ್ಚಾಗುತ್ತಿದೆ. ರಾಮಗೇರಿ, ಕುಂದ್ರಳ್ಳಿ, ಅಡರಕಟ್ಟಿ, ಯಳವತ್ತಿ, ಗೊಜನೂರ, ಬಾಲೇಹೊಸೂರ, ಹುಲ್ಲೂರ, ಬಡ್ನಿ, ಸೂರಣಗಿ, ಶಿಗ್ಲಿ ಸೇರಿ ಒಟ್ಟು 29 ಮನೆಗಳು ಕುಸಿದಿವೆ. ರಸ್ತೆಗಳು ಹಾಳಾಗಿವೆ ಮತ್ತು ಬೆಳೆಗಳ ಮೇಲೆ ಪರಿಣಾಮ ಬೀರುತ್ತಿದೆ. ಯಾವುದೇ ಜೀವಹಾನಿಯಾಗಿಲ್ಲ ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ.
>
> **-ಕೆ. ಆನಂದಶೀಲ,** ತಹಸೀಲ್ದಾರ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka